ಸಂಪುಟ : 10 ಸಂಚಿಕೆ 11 ಪುಟ : 4+2 ಬೆಲೆ: 3.00 ಗುರುವಾರ ಫೆಬ್ರವರಿ 6 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 11 Pages : 4+2 Price : 3.00 Thursday February 6 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 6 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 10 – ಸಿಹಿ ನೀರಿನ ಬಾವಿ ಸೆಟ್, ಮುಳಗುಂದರವರ ಲೈನ್, ಮಾನೇದವರ ಲೈನ್, ಮಸೂತಿ ಲೈನ್, ಮಲ್ಲಿಕಾರ್ಜುನ ಗುಡಿ, ಗಣಾಚಾರಿ ಲೇಔಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 – ಟೀಚರ್ಸ್ ಕಾಲೋನಿ ಪೂರ್ತಿ ಭಾಗಗಳು. ವಾರ್ಡ್ ನಂ. 12 – ಕರಿಯಮ್ಮ ಕಲ್ಲು, ಪಿ ಮತ್ತು ಟಿ ಕ್ವಾರ್ಟರ್ಸ್, ಗಣಪತಿ ಕಟ್ಟಿ, ಹನುಮಂತ ದೇವರ ಗುಡಿ, ಗಾಣಿಗೇರ ಭವನ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 19, 24, 25 – ಕುರುಬರ ಗರಡಿ, ಮಾಬು ಸುಭಾನಿ ಕಟ್ಟಿ, ಕೊಪ್ಪದವರ ಲೈನ್, ಖಾನತೋಟ 2 ಭಾಗಗಳು, ಹಾಳದಿಬ್ಬ 3 ಭಾಗಗಳು, ಅಬ್ಬಿಗೇರಿ ಲೈನ್, ಕರುಗಲ್ ಓಣಿ, ಪುಣೇಕರ ಲೈನ್, ಕರಿದೇವರ ಗುಡಿ, ಜಿ ಎಸ್ ಹಿರೇಮಠ, ಮದ್ಲಿ ಓಣಿ ಹಳೆ ಲೈನ್, ಜೀರ ಓಣಿ, ಗಣಪತಿ ಗುಡಿ, ಹನುಮಾನ ಗರಡಿ, ಜವಳಿ ಬಜಾರ್, ಹಿಡ್ಕಿಮಠ 2 ಭಾಗಗಳು, ಕೋಟಿಯವರ ಲೈನ್, ಮುನ್ನಿ ಪ್ರೆಸ್. ವಾರ್ಡ್ ನಂ. 1 – ಎಸ್ ಎಮ್ ಕೃಷ್ಣ ನಗರ ಪೂರ್ತಿ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಮತ್ತು ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 'ಜಗದ್ಗುರು ಶ್ರೀ ಸಿದ್ಧಾರೂಢ ಜ್ಯೋತಿ ರಥ ಯಾತ್ರೆ'ಗೆ ಸ್ವಾಗತ ಕೋರಿದ ಸಚಿವ ಎಚ್.ಕೆ. ಪಾಟೀಲ

# ಸಮಾಜದಲ್ಲಿ ಸೌಹಾರ್ದ, ಭ್ರಾತೃತ್ವ ಭಾವ ಬೆಳೆಯಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲ ಧರ್ಮೀಯರು, ಎಲ್ಲ ಜಾತಿಯವರು ಒಂದು ಎಂದು ನಡೆದುಕೊಳ್ಳುವ ಶ್ರದ್ಧಾಕೇಂದ್ರ ಸಿದ್ಧಾರೂಢ ಮಠ. ಎಲ್ಲ ಮಠ-ಮಾನ್ಯಗಳೊಂದಿಗೆ ಮೆಚ್ಚುಗೆ ಪಡೆದು ಸಮಾಜದಲ್ಲಿ ಭ್ರಾತೃತ್ವ ಭಾವನೆ ಮೂಡಿಸಿರುವ ಸಿದ್ಧಾರೂಢ ಮಠವು ಮನುಕುಲ ಒಂದಾಬೇಕು ಎಂಬ ಸಂದೇಶ ನೀಡುತ್ತ ರಾಜ್ಯ-ದೇಶದಲ್ಲಿ ಪ್ರಖ್ಯಾತಿ ಪಡೆದಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಸದ್ಗುರು ಶ್ರೀ ಸಿದ್ಧಾರೂಢರ 190ನೇ ಜಯಂತ್ಯುತ್ಸವ ಹಾಗೂ ತಾವು ಜೀವಂತವಿದ್ದಾಗಲೇ ಬರೆಯಿಸಿದ 'ಶ್ರೀ ಸಿದ್ಧಾರೂಢ' ಕಥಾಮೃತ ಗ್ರಂಥದ ಶತಮಾನೋತ್ಸವ ನಿಮಿತ್ತ ರಾಜ್ಯಾದ್ಯಂತ ಸಂಚರಿಸುತ್ತಿರುವ 'ಜಗದ್ಗುರು ಶ್ರೀ ಸಿದ್ಧಾರೂಢ ಜ್ಯೋತಿ ರಥ ಯಾತ್ರೆ' ನಗರದ ತೋಂಟದಾರ್ಯ ಮಠಕ್ಕೆ ಆಗಮಿಸಿದ ಸಂದರ್ಭದಲ್ಲಿ ಸ್ವಾಗತಿಸಿ ಅವರು ಮಾತನಾಡಿದರು. ದುಂದೂರು, ಹುಲಕೋಟಿ, ಬಿಂಕದಕಟ್ಟಿ ಗ್ರಾಮದಲ್ಲಿ ಅದ್ದೂರಿಯಿಂದ ಜ್ಯೋತಿರಥಯಾತ್ರೆಯನ್ನು ಬರಮಾಡಿಕೊಳ್ಳಲಾಗಿದ್ದು, ಜ್ಯೋತಿಯನ್ನು ಪ್ರಾರಂಭಿಸುವ ಉದ್ದೇಶ ಈಡೇರಬೇಕು. ಮನುಕುಲ ಒಂದಾಗಬೇಕು. ಸರ್ವರಲ್ಲಿ ಸದ್ಭಾವ, ಸಮಭಾವ ಬೆಳೆಯುವಂತಹ ವಾತಾವರಣ ಉಂಟಾಗಲಿ ಎಂದು ಹಾರೈಸಿದರು.

> ಸಿದ್ಧಾರೂಢರ ಜನ್ಮಸ್ಥಳ ಬೀದರ ಜಿಲ್ಲೆಯ ಬಾಲ್ಕಿ ತಾಲೂಕಿನ 'ಚಳಕಾಪೂರ'ದಿಂದ ಆರಂಭವಾಗಿರುವ 'ಜಗದ್ಗುರು ಶ್ರೀ ಸಿದ್ಧಾರೂಢ ಜ್ಯೋತಿ ರಥ ಯಾತ್ರೆ'ಯು ಗದಗ ನಗರದ ತೋಂಟದಾರ್ಯ ಮಠಕ್ಕೆ ಆಗಮಿಸಿತು. ನಂತರ ತೋಂಟದಾರ್ಯ ಮಠದಿಂದ ಕೆ.ಸಿ. ರಾಣಿ ರಸ್ತೆಯ ಮೂಲಕ ವೀರೇಶ್ವರ ಪುಣ್ಯಾಶ್ರಮ, ಅಲ್ಲಿಂದ ಭೂಮರಡ್ಡಿ ವೃತ್ತ, ಕೆ.ಎಚ್. ಪಾಟೀಲ ವೃತ್ತ, ಬಸವೇಶ್ವರ ವೃತ್ತ ಕಳಸಾಪೂರ ರಸ್ತೆ ಮೂಲಕ ಶ್ರೀ ಜಗದ್ಗುರು ಶಿವಾನಂದ ಮಠ ತಲುಪಿತು.



ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿ, ಸಿದ್ಧಾರೂಢರು ನಾಡು ಕಂಡ ಅಪೂರ್ವ ತತ್ವಜ್ಞಾನಿಗಳು. ವೇದಾಂತ ಕ್ಷೇತ್ರದ ಸರ್ವೋಚ್ಛ ನಾಯಕರಗಿದ್ದಾರೆ. ಸಿದ್ಧಾರೂಢರು ಆಧ್ಯಾತ್ಮಿಕ ಕ್ಷೇತ್ರದಲ್ಲಿ ಮೊಟ್ಟಮೊದಲಿಗೆ ವೇದಾಂತವನ್ನು ಪ್ರಸಾರ ಮಾಡಿದ ಪುಣ್ಯಪುರುಷರು. ಜ್ಞಾನದ ಸಾಧನಗಳು ಇಲ್ಲದಿರುವ ಕಾಲದಲ್ಲಿ ಶಾಸ್ತ್ರಗ್ರಂಥಗಳನ್ನು ಆಳವಾಗಿ ಅಧ್ಯಯನ ಮಾಡಿ ಅವುಗಳ ಸಾರವನ್ನು ಜನಮನಕ್ಕೆ ತಲುಪಿಸುವ ಮೂಲಕ ಪ್ರತಿಯೊಬ್ಬ ವ್ಯಕ್ತಿ ಆತ್ಮೋದ್ಧಾರ ಮಾಡಿಕೊಳ್ಳುವ ಅಪೂರ್ವ ಅವಕಾಶವನ್ನು ಕಲ್ಪಿಸಿಕೊಟ್ಟಿದ್ದಾರೆ ಎಂದರು.

ಮನುಷ್ಯ ಅರಿವಿನ ಪ್ರಾಣಿಯಾಗಿದ್ದು, ಮನುಷ್ಯರಾಗಿ ನಾವು ಹುಟ್ಟಿಬಂದ ಮೇಲೆ ಜ್ಞಾನವನ್ನು ಸಂಪಾದನೆ ಮಾಡುವುದೇ ನಮ್ಮ ಕರ್ತವ್ಯ ಎಂಬುದನ್ನು ಸಿದ್ಧಾರೂಢರು ತಮ್ಮ ಬದುಕಿನುದ್ದಕ್ಕೂ ಹೇಳಿಕೊಂಡು ಬಂದಿದ್ದಾರೆ. ಜ್ಞಾನವನ್ನು ಸಂಪಾದನೆ ಮಾಡಿಕೊಂಡಾಗ ಮೋಕ್ಷ ಪಡೆಯುತ್ತಾನೆ ಎಂದು ತಮ್ಮ ಜ್ಞಾನದ ಮೂಲಕ ತೋರಿಸಿಕೊಟ್ಟರು. ಜಾತಿ, ಮತ, ಪಂಥಗಳ ಬೇಧವಿಲ್ಲದೇ ಸರ್ವರಿಗೂ ಜ್ಞಾನವನ್ನು ತಲುಪಿಸುವ ಕಾರ್ಯ ಮಾಡಿದ ಸಿದ್ಧಾರೂಢರು, ಆಧ್ಯಾತ್ಮಿಕ ಕ್ಷೇತ್ರದಲ್ಲಿ ಜಾತ್ಯಾತೀತ ಪರಂಪರೆಯನ್ನು ಹುಟ್ಟುಹಾಕಿದರು ಎಂದರು.

> ಶರಣರು, ಸಂತರು, ಮಹಾತ್ಮರು ಯಾವುದನ್ನು ನಮ್ಮದಲ್ಲ ಎಂದು ಹೇಳಿದ್ದಾರೋ ಅವುಗಳನ್ನು ಇಂದು ನಾವು ನಮ್ಮ ಅಜ್ಞಾನದಿಂದ ನಮ್ಮದು ನಮ್ಮದು ಎಂದು ಹೇಳುತ್ತಿದ್ದೇವೆ. ಹೆಣ್ಣು, ಹೊನ್ನು, ಮಣ್ಣಿಗಾಗಿ ನಾವು ನಮ್ಮ ಇಡೀ ಬದುಕನ್ನು ಸವೆಸುತ್ತಿದ್ದೇವೆ. ನಾವು ನಿಜವಾಗಿ ಗಳಿಸಬೇಕಾಗಿರುವುದು ಜ್ಞಾನ. ಭೌತಿಕವಾಗಿರುವ ಸಂಪತ್ತು ಇಲ್ಲದಿದ್ದರೂ ಜ್ಞಾನವನ್ನು ಸಂಪಾದನೆ ಮಾಡಿದಾಗ ಶ್ರೀಮಂತನಾಗಿ ರೂಪುಗೊಳ್ಳುತ್ತಾನೆ ಎಂದು ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಹೇಳಿದರು.

> ಬಸವ ತತ್ವದಲ್ಲಿ ವಿಶ್ವಾಸವಿರುವವರೆಲ್ಲರೂ ಸಿದ್ಧಾರೂಢರ ತತ್ವಸಿದ್ಧಾಂತಗಳನ್ನು ಒಪ್ಪಲೇಬೇಕು. ಅಂತಹ ಮಹಾನ್ ತಪಸ್ವಿ ಸಿದ್ಧಾರೂಢರ ಜ್ಯೋತಿಯ ಉದ್ದೇಶ ಸ್ಪಷ್ಟವಾಗಿದೆ. ಸಮಾಜದಲ್ಲಿ ಸೌಹಾರ್ದ, ಪ್ರೀತಿ, ಭ್ರಾತೃತ್ವ ಇರಬೇಕು. ಬದುಕು ಸದ್ಭಾವನೆಯಿಂದ ಕೂಡಿರಬೇಕು ಎಂದು ಜಾಗೃತಿ ಮೂಡಿಸುವ ಸಲುವಾಗಿ ಸಿದ್ಧಾರೂಢರ ಜ್ಯೋತಿ ನಮ್ಮ ಭಾಗದಲ್ಲಿ ಸಂಚರಿಸುತ್ತಿರುವುದು ನಮ್ಮಲ್ಲಿ ಭಕ್ತಿ ಭಾವ ಮೂಡಿಸಿದೆ.
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶ್ರೀ ಸಿದ್ಧಾರೂಢ ಭಕ್ತರ ಮೇಲ್ಮನೆ ಸಭಾ ಅಧ್ಯಕ್ಷರೂ ಆಗಿರುವ ಮಾಜಿ ಶಾಸಕ ಡಿ.ಆರ್. ಪಾಟೀಲ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್ಲ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಕಲ್ಯಾಣಶೆಟ್ಟರ, ರುದ್ರಮ್ಮ ಕೆರಕಲಮಟ್ಟಿ, ನೀಲಮ್ಮ ಬೋಳನವರ ಸೇರಿ ಹಲವರು ಪಾಲ್ಗೊಂಡಿದ್ದರು.

### ಪ್ರತಿಭಾವಂತ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಕಾರ್ಯಾಗಾರದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ರ‍್ಯಾಂಕ್‌ಗಳ ಮೂಲಕ ವಿದ್ಯಾಕಾಶಿಗೆ ಮೆರಗು ತನ್ನಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಶೈಕ್ಷಣಿಕ ಸುಧಾರಣೆಗಾಗಿ 'ಮಿಶನ್ ವಿದ್ಯಾಕಾಶಿ' ಯೋಜನೆಯಡಿ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳ ಓದುಬರಹ ಸುಧಾರಣೆ, ಎಸ್‌ಎಸ್‌ಎಲ್‌ಸಿ ಅನುತ್ತೀರ್ಣತೆಯ ಪ್ರಮಾಣ ಕಡಿಮೆ ಮಾಡುವುದು ಮತ್ತು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಹೆಚ್ಚು ರ‍್ಯಾಂಕ್ ಗಳಿಸುವ ಉದ್ದೇಶವನ್ನು ಮಿಶನ್ ವಿದ್ಯಾಕಾಶಿ ಹೊಂದಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಬುಧವಾರ ಬೆಳಿಗ್ಗೆ ನಗರದ ಕೆ.ಇ. ಬೋರ್ಡ್ ಸಂಸ್ಥೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಶಾಲಾ ಶಿಕ್ಷಣ ಇಲಾಖೆ ಸಂಯುಕ್ತವಾಗಿ ಮಿಶನ್ ವಿದ್ಯಾಕಾಶಿ ಯೋಜನೆಯಡಿ ವಿವಿಧ ತಾಲೂಕುಗಳ ಪ್ರತಿಭಾವಂತ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ 'ನಮ್ಮ ಗುರಿ ನೂರರತ್ತ-ಪ್ರೇರಣಾ ಕಾರ್ಯಾಗಾರ' ಉದ್ಘಾಟಿಸಿ ಮಾತನಾಡಿದರು.



ಧಾರವಾಡ ಜಿಲ್ಲೆಯಿಂದ ಸುಮಾರು 29 ಸಾವಿರ ಮಕ್ಕಳು ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ತಮ್ಮ ಹೆಸರು ನೋಂದಾಯಿಸಿಕೊಂಡಿದ್ದಾರೆ. ಎಲ್ಲ ಮಕ್ಕಳು ಪರೀಕ್ಷೆಯಲ್ಲಿ ಉತ್ತೀರ್ಣರಾಗುವಂತೆ ಅವರ ಕಲಿಕಾಗುಣಮಟ್ಟಕ್ಕೆ ಅನುಗುಣವಾಗಿ ಶಿಕ್ಷಕರಿಂದ ಪ್ರತ್ಯೇಕವಾಗಿ ಮತ್ತು ವಿಶೇಷವಾಗಿ ಓದು ಬರಹ ಕಲಿಸಲಾಗುತ್ತಿದೆ ಎಂದು ತಿಳಿಸಿದರು.

> ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಪರೀಕ್ಷೆಗಳನ್ನು ವೇಳಾಪಟ್ಟಿಗೆ ಅನುಗುಣವಾಗಿ, ಏಕಾಗ್ರತೆ ಮತ್ತು ಯೋಜನಾಬದ್ಧವಾಗಿ ತಯಾರಿ ಮಾಡಿಕೊಳ್ಳಬೇಕು. ಎಸ್‌ಎಸ್‌ಎಲ್‌ಸಿ ಪರೀಕ್ಷಾ ಸಿದ್ಧತೆಗೆ ಇದು ಮುಖ್ಯ ಕಾಲವಾಗಿದ್ದು, ಪ್ರತಿದಿನ ವಿಷಯವಾರು ಪುನರ್ ಮನನ ಮಾಡಿಕೊಳ್ಳಬೇಕೆಂದು ತಿಳಿಸಿದರು.

ಜಿಲ್ಲೆಗೆ ಈ ಬಾರಿ ಹೆಚ್ಚು ರ‍್ಯಾಂಕ್ ತರಬೇಕು ಎಂಬ ಹಿನ್ನಲೆಯಲ್ಲಿ ಚಾಣಾಕ್ಷ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಶಾಲಾ ಶಿಕ್ಷಣ ಇಲಾಖೆ ಮೂಲಕ ಪ್ರತಿ ತಾಲೂಕಿನಲ್ಲಿ ಗುರುತಿಸಿ, ಅವರಿಗೆ ಪ್ರೋತ್ಸಹ ನೀಡಲಾಗುತ್ತಿದೆ. ಅದರಂತೆ ಪ್ರತಿ ತಾಲೂಕಿನಿಂದ ವಿಶೇಷವಾಗಿ 20 ವಿದ್ಯಾರ್ಥಿಗಳನ್ನು ಅವರ ಶೈಕ್ಷಣಿಕ ಸಾಧನೆ, ಪರೀಕ್ಷಾ ಗುಣಮಟ್ಟ ಗಮನಿಸಿ, ನಮ್ಮ ಗುರಿ ನೂರರತ್ತ ಪ್ರೇರಣಾ ಕಾರ್ಯಾಗಾರದಲ್ಲಿ ತರಬೇತಿಗೆ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು.

ಕೆ.ಇ. ಬೋರ್ಡ್ ಸಂಸ್ಥೆಯ ಕಾರ್ಯದರ್ಶಿ ಡಿ.ಎಸ್. ರಾಜಪೂರೋಹಿತ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಎಸ್‌ಎಸ್‌ಎಲ್‌ಸಿ ಎಂಬುದು ಶೈಕ್ಷಣಿಕ ಬದುಕಿನ ಮೊದಲ ಮೆಟ್ಟಿಲು. ಭಕ್ತಿ, ಶ್ರದ್ಧೆ ಮತ್ತು ಹೃದಯದಿಂದ ಓದಬೇಕು. ಅಂದಾಗ ಮಾತ್ರ ಶಿಕ್ಷಣ ಒಲಿಯುತ್ತದೆ. ಓದುಬರಹವನ್ನು ಪ್ರೀತಿಸಿ, ಮೆಚ್ಚಿ ಮುನ್ನಡೆಯಿರಿ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ, ಕ್ಷೇತ್ರಶಿಕ್ಷಣಾಧಿಕಾರಿಗಳಾದ ಅಶೋಕ ಸಿಂದಗಿ, ರಾಮಕೃಷ್ಣ ಸದಲಗಿ, ಉಪಯೋಜನಾಧಿಕಾರಿ ಎಸ್. ಎಮ್. ಹುಡೆದಮನಿ, ಡೈಟ್ ಹಿರಿಯ ಉಪನ್ಯಾಸಕ ಎ.ಎ. ಖಾಜಿ, ಶಿಕ್ಷಣ ಅಧಿಕಾರಿ ನಾಫೀಸಾಬಾನು ದಾವಲಸಾಬನವರ ಸೇರಿದಂತೆ ಇತರರು ವೇದಿಕೆಯಲ್ಲಿದ್ದರು.

ಕೆ.ಇ. ಬೋರ್ಡ್ ಸಂಸ್ಥೆಯ ಪಿಯು ಕಾಲೇಜ್ ಪ್ರಾಚಾರ್ಯ ಎನ್.ಎಸ್. ಗೋವಿಂದರಡ್ಡಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತಾಡಿದರು. ಸಹಾಯಕ ಸಮನ್ವಯ ಅಧಿಕಾರಿ ರೇಣುಕಾ ಅಮಲಜೇರಿ ವಂದಿಸಿದರು.

## ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜೀವ ಅತ್ಯಮೂಲ್ಯವಾಗಿದ್ದು, ಮಕ್ಕಳು, ಸಾರ್ವಜನಿಕರು, ವಾಹನ ಸವಾರರು ಸೇರಿ ಪ್ರತಿಯೊಬ್ಬರೂ ರಸ್ತೆ ಸುರಕ್ಷತಾ ನಿಯಮಗಳನ್ನು ತಿಳಿದು ಪಾಲಿಸಬೇಕು ಎಂದು ಗದಗ ಆರ್‌ಟಿಓ ಬಾಲಚಂದ್ರ ಹೆಚ್.ಟಿ. ಹೇಳಿದರು.



ಅವರು ಬುಧವಾರ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಪ್ರಯುಕ್ತ ಪಟ್ಟಣದ ಎಂಜಿಎಂ ಯೂನಿವರ್ಸಲ್ ಸ್ಕೂಲ್‌ನಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದರು.

▶▶ 4ನೇ ಪುಟಕ್ಕೆ




# ಚಿತ್ರ ಪ್ರೇಕ್ಷಕರ ಹೃದಯ ತಲುಪಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಎಷ್ಟೊಂದು ಮನಸುಗಳಿಗೆ ಈ ಚಲನಚಿತ್ರ ಸ್ಫೂರ್ತಿಯಾಗಲಿದ್ದು, ಬಹಳಷ್ಟು ಜನರ ಹೃದಯ ತಲುಪಬೇಕು ಎಂಬುದು ನಮ್ಮೆಲ್ಲರ ಪ್ರಯತ್ನ. ಒಳ್ಳೆಯ ಚಿತ್ರವನ್ನು ಪ್ರೇಕ್ಷಕರಿಗೆ ಒದಗಿಸಬೇಕೆಂಬ ಸಂಕಲ್ಪ ಹೊಂದಿದ್ದೇವೆ. ಕ್ಷೇತ್ರಪತಿ, ರ‍್ಯಾಂಬೋ, ಸಲಾರ್ ನಂತರ ಈಗ 'ನೋಡಿದವರು ಏನಂತಾರೆ' ಎಂಬ ಚಿತ್ರ ತೆರೆಗೆ ಬರಲಿದ್ದು, ಚಿತ್ರದಲ್ಲಿ ಸಿದ್ಧಾರ್ಥ ಎಂಬ ಹೆಸರಿನಿಂದ ಪಾತ್ರ ಮಾಡುತ್ತಿರುವುದಾಗಿ ನಟ ನವೀನ್ ಶಂಕರ್ ತಿಳಿಸಿದರು.




ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ತರ ಕರ್ನಾಟಕದ ಪ್ರತಿಭೆಗಳನ್ನು ಗುರುತಿಸಿ ನಟನೆಗೆ ಅವಕಾಶ ಕಲ್ಪಿಸಲಾಗುತ್ತಿದ್ದು, ನೋಡಿದವರು ಏನಂತಾರೆ ಚಿತ್ರದ ಬಿಡುಗಡೆಗೆ ಸಿದ್ಧವಾಗಿದೆ. ಬೆಂಗಳೂರು, ಮೈಸೂರು ಸೇರಿದಂತೆ ರಾಜ್ಯದ ಅನೇಕ ಜಿಲ್ಲೆಗಳಲ್ಲಿ ತೆರೆಗೆ ಬರಲಿದೆ. ಜನರನ್ನು ನಮ್ಮ ನಟನೆ ಮೊದಲು ತಲುಪಬೇಕು. ನಂತರ ವ್ಯಕ್ತಿ ತಲುಪಬೇಕೆಂದು ನಟ ನವೀನ್ ಶಂಕರ ಹೇಳಿದರು.

ನಿರ್ಮಾಪಕ ಕುಲದೀಪ ಕಾರ್ಯಪ್ಪ ಮಾತನಾಡಿ, ಕನ್ನಡ ಚಲನಚಿತ್ರಗಳು ಪ್ರದರ್ಶನಗೊಳ್ಳುವುದು ಕಷ್ಟವೆಂದುಕೊಂಡ ಸಂದರ್ಭದಲ್ಲಿ ಚಿತ್ರದ ಸಂಖ್ಯೆ ಹೆಚ್ಚಾಗುತ್ತಿದ್ದು, ಇದರಿಂದ ಪ್ರೇಕ್ಷಕರಿಗೆ ಇನ್ನೂ ಒಳ್ಳೆಯ ಚಿತ್ರಗಳನ್ನು ನೀಡಬೇಕೆಂದು ಅಂದುಕೊಂಡಿದ್ದೇವೆಂದು ಹೇಳಿದರು.

ಈ ಸಂದರ್ಭದಲ್ಲಿ ನಿರ್ಮಾಪಕರಾದ ನಾಗೇಶ, ನಿಂಗಪ್ಪ ಹುಣಸಿಮರದ ವಿಜಯ ಕಿರೆಸೂರ, ಕೃಷ್ಣ ನಾಯಕ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 40ಅಡಿ ಬಾವಿಗೆ ಬಿದ್ದ ಗಂಡನನ್ನು ರಕ್ಷಿಸಿದ 56ವರ್ಷದ ಮಹಿಳೆ



■ವಿಜಯಸಾಕ್ಷಿ ಸುದ್ದಿ, ಕೇರಳ

ಕಾಳು ಮೆಣಸು ಕೀಳುವಾಗ ಮನೆಯ ಬಾವಿಗೆ ಬಿದ್ದಿದ್ದ ತನ್ನ ಗಂಡನನ್ನು 56 ವರ್ಷದ ಮಹಿಳೆಯೊಬ್ಬರು ರಕ್ಷಿಸಿರುವ ಘಟನೆ ಬುಧವಾರ ಕೇರಳದಲ್ಲಿ ನಡೆದಿದೆ. 64 ವರ್ಷದ ರಮೇಶ್ ಎಂದು ಗುರುತಿಸಲಾದ ವ್ಯಕ್ತಿಯು ಬಳ್ಳಿಗಳಿಂದ ಕರಿಮೆಣಸು ಕೀಳುವಲ್ಲಿ ನಿರತರಾಗಿದ್ದರು.

ಅವರು ಕರಿಮೆಣಸು ಕೀಳುತ್ತಿದ್ದಾಗ ಏಣಿ ಜಾರಿ ಬಿದ್ದದ್ದು, ಮರ ಬಾವಿಯ ಹತ್ತಿರ ಇದ್ದುದರಿಂದ ರಮೇಶ್ ಅದರೊಳಗೆ ಬಿದ್ದಿದ್ದಾರೆ. ಮನೆಯೊಳಗಿದ್ದ ಧೈರ್ಯಶಾಲಿ ಪದ್ಮಾ ಶಬ್ದ ಕೇಳಿ ಹೊರಗೆ ಓಡಿ ಬಂದು ತನ್ನ ಪತಿ 40 ಅಡಿ ಬಾವಿಗೆ ಬಿದ್ದಿರುವುದನ್ನು ನೋಡಿ ಗಾಬರಿಗೊಂಡರು.

ಕೂಗುತ್ತಾ ಕೂಗುತ್ತಾ, ಪದ್ಮಾ ನಿಧಾನವಾಗಿ ಮತ್ತು ಎಚ್ಚರಿಕೆಯಿಂದ ಹಗ್ಗವನ್ನು ಬಳಸಿ ಬಾವಿಯೊಳಗೆ ಪ್ರವೇಶಿಸಿದರು. ಸುಮಾರು ಐದು ಅಡಿ ನೀರಿದ್ದ ಬಾವಿಯ ತಳವನ್ನು ತಲುಪಿದ ನಂತರ, ಅವರು ರಮೇಶ ಅವರನ್ನು ಮೇಲಕ್ಕೆತ್ತಿ ಹತ್ತಿರ ಹಿಡಿದರು.

ಆ ಹೊತ್ತಿಗೆ, ಸ್ಥಳೀಯರು ಒಟ್ಟುಗೂಡಿದರು ಮತ್ತು ಸುಮಾರು 20 ನಿಮಿಷಗಳಲ್ಲಿ, ಅಗ್ನಿಶಾಮಕ ದಳದ ರಕ್ಷಣಾ ತಂಡ ಬಂದಿತು. ಅಗ್ನಿಶಾಮಕ ದಳದ ಸ್ಥಳೀಯ ಅಧಿಕಾರಿ ಪ್ರಫುಲ್, ಪದ್ಮಾ ಅವರನ್ನು ಕರೆದು ಎಲ್ಲವೂ ಸರಿಯಾಗಿದೆಯೇ ಎಂದು ಕೇಳಿದರು.

"ಯಾರೂ ಕೆಳಗೆ ಇಳಿಯುವ ಅಗತ್ಯವಿಲ್ಲ, ಬದಲಾಗಿ ಬಲೆ ಕಳುಹಿಸಬೇಕೆಂದು ಆಕೆ ನಮಗೆ ಹೇಳಿದರು. ಆದ್ದರಿಂದ, ನಾವು ಬಲೆ ಇಳಿಸಿದೆವು; ಅವರಿ ಮೊದಲು ರಮೇಶ ಅವರನ್ನು ಬಲೆಯೊಳಗೆ ಸೇರಿಸಿದರು. ನಂತರ, ನಾವು ಅವನನ್ನು ಮೇಲಕ್ಕೆ ಎಳೆದೆವು. ನಂತರ ಆಕೆ ಮೇಲಕ್ಕೆ ಬಂದತು. ಹಗ್ಗದ ಮೇಲೆ 40 ಅಡಿ ಬಾವಿಗೆ ಇಳಿದ ಕಾರಣ ಆಕೆಯ ಕೈಗಳು ಸಂಪೂರ್ಣವಾಗಿ ಗಾಯಗೊಂಡಿದ್ದವು.

ರಮೇಶ್ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದೆ, ಅವರು ಚೆನ್ನಾಗಿದ್ದಾನೆ. ಆದರೆ, ಪದ್ಮಾ ಅವರ ಧೈರ್ಯಶಾಲಿ ಕೃತ್ಯವನ್ನು ಸಂಪೂರ್ಣವಾಗಿ ಪ್ರಶಂಸಿಸಬೇಕು ಎಂದು ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಅಗ್ನಿಶಾಮಕ ದಳದ ಅಧಿಕಾರಿ ಪ್ರಫುಲ್ ಹೇಳಿದರು.

ಅವರು ಸುಮಾರು 40 ನಿಮಿಷಗಳಲ್ಲಿ ಸ್ಥಳವನ್ನು ತಲುಪಿದರು, ಇಬ್ಬರೂ ಸುಮಾರು 20 ನಿಮಿಷಗಳ ಕಾಲ ಒಳಗೆ ಕಾಯಬೇಕಾಯಿತು ಎಂದು ಪ್ರಫುಲ್ ಹೇಳಿದರು.

## ಅತ್ಯಂತ ದೊಡ್ಡ ಎಫ್‌ಎಲ್‌ಎನ್ ಕಲಿಕಾ ಹಬ್ಬ ಹಮ್ಮಿಕೊಂಡ ರಾಜ್ಯ ಯೋಜನಾ ವಿಭಾಗ ಮತ್ತು ಸಮಗ್ರ ಶಿಕ್ಷಣ-ಕರ್ನಾಟಕ

# ಸೃಜನಾತ್ಮಕತೆಯ ಸಂಖ್ಯಾಜ್ಞಾನೋತ್ಸವ 'ಕಲಿಕಾ ಹಬ್ಬ'

ಮಗುವಿನ ಮನಸ್ಸಿಗೆ ಕಲಿಯುವ ಆಸಕ್ತಿಯ ಭಾವನೆಗಳ ಬಣ್ಣವಿದೆ. ಸೆಳೆಯುವ ರೂಪವಿದೆ, ಪ್ರತಿಕ್ರಿಯಿಸುವ ಭಾವವಿದೆ. ಮರುಗುವ ಹೃದಯವಿದೆ, ಕರಗುವ ಮನಸ್ಸಿದೆ, ಅದಕ್ಕಾಗಿಯೇ ಅವರನ್ನು ದೇವರಿಗೆ ಹೋಲಿಸುತ್ತಾರೆ. ಪ್ರತಿಯೊಂದು ಮಗು ತನ್ನ ಅಸ್ತಿತ್ವವನ್ನು ತನಗೆ ಕಲಿಸುವ ಶಿಕ್ಷಕರಲ್ಲಿ ಹುಡುಕುತ್ತದೆ.

ಹೀಗಾಗಿ ಕೋವಿಡ್-19ರ ಸಾಂಕ್ರಾಮಿಕದ ಪರಿಣಾಮದಿಂದ ವಿದ್ಯಾರ್ಥಿಗಳಲ್ಲಿ ಉಂಟಾದ ಕಲಿಕಾ ಕೊರತೆ ಮತ್ತು ತರಗತಿಯಲ್ಲಿ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ ಕೊರತೆಯನ್ನು ಸರಿದೂಗಿಸುವ ನಿಟ್ಟಿನಲ್ಲಿ 'ಎಫ್‌ಎಲ್‌ಎನ್ ಕಲಿಕಾ ಹಬ್ಬ' ಕಾರ್ಯಕ್ರಮವನ್ನು ರೂಪಿಸಲಾಗಿದ್ದು,2024-25ನೇ ಶೈಕ್ಷಣಿಕ ವರ್ಷವನ್ನು ಶೈಕ್ಷಣಿಕ ಬಲವರ್ಧನಾ ವರ್ಷವೆಂದು ಘೋಷಿಸಲಾಗಿದೆ.

ಚಟುವಟಿಕೆ ಆಧಾರಿತ ಕಲಿಕೆಯ ಎಫ್‌ಎಲ್‌ಎನ್ ಕಲಿಕಾ ಹಬ್ಬವು ಕಲಿಕಾ ಉಪಕ್ರಮದ ಮಹತ್ವದ ಅಂಶವಾಗಿದೆ. ಈ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆಯ 'ಸಮಗ್ರ ಶಿಕ್ಷಣ-ಕರ್ನಾಟಕ' ಯೋಜನಾ ವಿಭಾಗವು ದೇಶದಲ್ಲೇ ಅತ್ಯಂತ ದೊಡ್ಡ ಈಐಓ ಕಲಿಕಾ ಹಬ್ಬವನ್ನು ಹಮ್ಮಿಕೊಂಡಿದೆ. ಕಲಿಕಾ ಚೇತರಿಕೆಗೆ ಪೂರಕವಾಗಿ ಈ 'ಕಲಿಕಾ ಹಬ್ಬ'. ಇದು ಫೆಬ್ರವರಿ 2025ರಲ್ಲಿ ಶಿಕ್ಷಣ ಇಲಾಖೆಯಿಂದ ಹಮ್ಮಿಕೊಳ್ಳುವ ಒಂದು ವಿನೂತನ ಕಾರ್ಯಚಟುವಟಿಕೆಯಾಗಿದೆ.

ಸರ್ಕಾರಿ ಶಾಲೆಗಳಿಗೆ ಸಂಬಂಧಿಸಿದಂತೆ ಕ್ಲಸ್ಟರ್ ಮಟ್ಟದಲ್ಲಿ 1ರಿಂದ 5ನೇ ತರಗತಿಯ ವಿದ್ಯಾರ್ಥಿಗಳಿಗೆ ಅದರಲ್ಲೂ ವಿಶೇಷವಾಗಿ, ಬುನಾದಿ/ಮೂಲಭೂತ ಸಾಕ್ಷರತೆ ಮತ್ತು




ಸಂಖ್ಯಾಜ್ಞಾನದ (ಈಐಓ) ಚಟುವಟಿಕೆಗಳ ಬಲವರ್ಧನೆಗೆ ಕಲಿಕಾ ಹಬ್ಬವು ಸಂತೋಷದಾಯಕ ಹಾಗೂ ಅನುಭವಯುಕ್ತ ಕಲಿಕೆಯ ವಾತಾವರಣವನ್ನು ಪ್ರೇರೇಪಿಸುತ್ತದೆ. ಇಂತಹ ಸಂದರ್ಭಗಳು ಕಾಲ ಕ್ರಮೇಣ ಮಕ್ಕಳ ಕಲಿಕೆಯ ಒತ್ತಡವನ್ನು ಕಡಿಮೆಗೊಳಿಸಲು ಸಹಕಾರಿಯಾಗುತ್ತವೆ.

1ರಿಂದ 5ನೇ ತರಗತಿಯ ಎಲ್ಲಾ ಶಾಲೆಗಳಿಂದ ಆಯ್ದ 100ರಿಂದ 110 ಮಕ್ಕಳಿಗೆ ಅಥವಾ ಆ ಕ್ಲಸ್ಟರಿನ ಶಾಲಾ ಮಕ್ಕಳಿಗೆ ಅನುಗುಣವಾಗಿ ಯೋಜಿಸಲಾಗುತ್ತಿದೆ. ಪ್ರತಿ ಶಾಲೆಯ ದಾಖಲಾತಿ ಈಐಓ ಮಕ್ಕಳನ್ನು ಗಮನದಲ್ಲಿ ಇರಿಸಿ ಅಖಕ ಗಳೇ ನಿಗದಿಪಡಿಸಿ ಲಿಂಗ ಆಧರಿಸಿ ಆಯ್ಕೆ ಇಲ್ಲದಿದ್ದರೂ ಗಂಡು ಹೆಣ್ಣು ಮಕ್ಕಳಿಗೆ ಸಮಾನ ಪ್ರಾಮುಖ್ಯತೆ ನೀಡಿ, ಆಯ್ಕೆ ಮಾಡುವುದು, ಈಐಓ ಗೆ ಒಳಪಟ್ಟು ಶಾಲಾ ಹಂತದಲ್ಲಿ ಚಟುವಟಿಕೆ ಮೂಲಕ ಪ್ರಗತಿ ಸಾಧಿಸಿರುವ ಸಾಧಿಸುತ್ತಿರುವ ಮಕ್ಕಳನ್ನು ಆಯ್ಕೆ ಮಾಡಲಾಗುತ್ತದೆ.

ಒಟ್ಟೂ 7 ವಲಯಗಳಲ್ಲಿ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ಆಯೋಜಿಸಲು ಎಫ್‌ಎಲ್‌ಎನ್ ಮಕ್ಕಳಿಗೆ ಪ್ರೋತ್ಸಾಹಿಸಲಾಗುತ್ತದೆ. ಎಫ್‌ಎಲ್‌ಎನ್ ಕಲಿಕಾ ಹಬ್ಬವನ್ನು ಆಯೋಜಿಸುವುದರಿಂದ ಮಕ್ಕಳು ಮತ್ತು ಶಿಕ್ಷಕರು ಜೊತೆಯಾಗಿ ಪೋಷಕರನ್ನು ಹಾಗೂ ಸಮುದಾಯದ ಸದಸ್ಯರನ್ನು ಪರಸ್ಪರ ಭೇಟಿಯಾಗಲು, ಅವರನ್ನು ಸಂತಸದಾಯಕ ವಾತಾವರಣದ ಕಡೆಗೆ ಸ್ವಾಗತಿಸಲು ಮತ್ತು ಕಲಿಕೆಯ ಅವಕಾಶವನ್ನು ಸಮುದಾಯದೊಂದಿಗೆ ವಿಸ್ತರಿಸಲು ಕ್ಲಸ್ಟರ್ ಮಟ್ಟದಲ್ಲಿ ಕಲಿಕಾ ಹಬ್ಬವನ್ನು ಆಯೋಜಿಸಲು ಉದ್ದೇಶಿಸಲಾಗಿದೆ. ಇದರಿಂದಾಗಿ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಆ ಕ್ಲಸ್ಟರ್ ಒಳಗಿನ ಶಾಲೆಗಳು ತಮ್ಮೊಳಗಿರುವ ಉತ್ತಮ ಅಭ್ಯಾಸಗಳನ್ನು ಪರಸ್ಪರ ಹಂಚಿಕೊಳ್ಳಲು ಒಂದು ವೇದಿಕೆಯನ್ನು ಒದಗಿಸಿದಂತಾಗುತ್ತದೆ.

ಕಲಿಕಾ ಹಬ್ಬವು ಶೈಕ್ಷಣಿಕ ಪರಿಸರದ ಬೆಂಬಲ ವ್ಯವಸ್ಥೆಯನ್ನು ಗಟ್ಟಿಗೊಳಿಸುವುದು, ಪರಸ್ಪರ ಹಂಚಿಕೊಂಡ ಕಲಿಕೆಯ ಅನುಭವಗಳು ಮಕ್ಕಳ ಹಾಗೂ ಒಂದು ಶಾಲೆಯ ಸಾಮೂಹಿಕ ಬೆಳವಣಿಗೆ ಮತ್ತು

ವಿಭಿನ್ನ ಕಲಿಕೆಯ ವೇಗ ಅಥವಾ ಶೈಲಿಯನ್ನು ಹೊಂದಿರುವ ಮಕ್ಕಳು ಇಂತಹ ಕಲಿಕಾ ಉತ್ಸವಗಳಲ್ಲಿ ತೊಡಗಿಕೊಂಡಾಗ ವೈವಿಧ್ಯಮಯವಾದ ವಿಧಾನಗಳಿಂದ ಹಾಗೂ ತಂತ್ರಗಾರಿಕೆಯಿಂದ ಹೆಚ್ಚು ಪ್ರಯೋಜನವನ್ನು ಪಡೆಯುತ್ತಾರೆ. 1ರಿಂದ 5ನೇ ತರಗತಿಯ ಮಕ್ಕಳನ್ನು ವಿವಿಧ ಕಲಿಕಾ ಆಟಗಳಲ್ಲಿ ಮತ್ತು ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಾಗ, ತರಗತಿ ಪ್ರಕ್ರಿಯೆಯಲ್ಲಿ ನಿರೀಕ್ಷಿತ ಕಲಿಕಾ ಫಲಶೃತಿಯನ್ನು ಪಡೆಯಲು ಸಾಧ್ಯವಿದೆ. ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬವು ಸಹಯೋಗದ ಕಲಿಕೆಗೆ ಸ್ಥಳಾವಕಾಶವನ್ನು ನೀಡುವ ಮೂಲಕ, ಸಮುದಾಯದೊಳಗಿನ ವಿವಿಧ ಭಾಗೀದಾರರ ಭಾಗವಹಿಸುವಿಕೆಯನ್ನು ಉತ್ತೇಜಿಸಬೇಕೆನ್ನುವುದು ಎಫ್‌ಎಲ್‌ಎನ್ ಕಲಿಕಾ ಹಬ್ಬದ ಪ್ರಮುಖ ಆಶಯವಾಗಿದೆ.

ಸುಧಾರಣೆಯನ್ನು ಪ್ರೋತ್ಸಾಹಿಸುತ್ತವೆ. ಮೋಜಿನ ಮತ್ತು ಆಕರ್ಷಕವೆನಿಸುವ ಕಾರ್ಯಕ್ರಮಗಳು ಶಾಲೆಗೆ ಉತ್ಸಾಹವನ್ನು ಮತ್ತಷ್ಟು ಹೆಚ್ಚಿಸುತ್ತವೆ ಮಾತ್ರವಲ್ಲದೆ, ವಿಶೇಷವಾಗಿ ಮೊದಲ ತಲೆಮಾರಿನ ಕಲಿಕಾರ್ಥಿಗಳು ಇಂತಹ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಲು ಎದುರು ನೋಡುತ್ತಿರುತ್ತಾರೆ.

ಸೃಜನಶೀಲತೆಯ ಮೂಲಕ ಸಾಂಘಿಕ ಸಾಮರ್ಥದೊಂದಿಗೆ ಮಕ್ಕಳು ಸಮಾಜೀಕರಣವಾಗುವುದನ್ನು ಕಲಿಕಾ ಹಬ್ಬವು ಪ್ರೋತ್ಸಾಹಿಸುತ್ತದೆ. ಕಲೆ, ಸಂಗೀತ ಮತ್ತು ದೈಹಿಕ ಆಟಗಳೊಂದಿಗೆ ಸಂಯೋಜಿಸಲ್ಪಟ್ಟ ಈಐಓ ಚಟುವಟಿಕೆಗಳು ಮನೋಜನ್ಯ, ಭಾವನಾತ್ಮಕ ಮತ್ತು ದೈಹಿಕವಾದ ಕೌಶಲ್ಯಗಳನ್ನು ಮಕ್ಕಳಲ್ಲಿ ಅಭಿವೃದ್ಧಿಪಡಿಸಲು ಒಂದು ಸಾಧನವಾಗಿ ಕೆಲಸ ಮಾಡುತ್ತದೆ.

ಮಗುವೇ ಕಲಿಕೆಯ ಸಂದರ್ಭಗಳನ್ನು ಸೃಜಿಸುವ, ನಿಭಾಯಿಸುವ ಮತ್ತು ಈ ಪ್ರಕ್ರಿಯೆಯಲ್ಲಿ ದೊರೆತ ಅನುಭವಗಳ ಮೂಲಕ ತನ್ನದೇ ಜ್ಞಾನ ಸೃಷ್ಟಿಯಲ್ಲಿ ತೊಡಗುವ ವಿದ್ಯಾರ್ಥಿಗಳು ತರಗತಿ ಕೋಣೆಗಳಲ್ಲಿ ಮತ್ತು ತರಗತಿ ಹೊರಗೆ ಕಲಿಯುವ ಜ್ಞಾನವನ್ನು ನಿಜವಾಗಿಸಲು ಹಾಗೂ ಕಲಿಕಾ ಸಾಮರ್ಥ್ಯ ದೃಢೀಕರಣವಾಗಲು ಇಂತಹ ಕಲಿಕಾ ಹಬ್ಬಗಳು ಅಗತ್ಯ. ಆದ್ದರಿಂದ ಕಲಿಕೆಯ ಹಬ್ಬವು ಘಟನೆಯಾಗದೆ ನಿತ್ಯದ ಬದುಕಾಗಲಿ.

ಒಟ್ಟಾರೆಯಾಗಿ ಈ ಹಬ್ಬದಲ್ಲಿ ಶಿಕ್ಷಣಾಸಕ್ತರು, ಪೋಷಕರು ಮಾತ್ರವಲ್ಲದೇ, ಊರಿಗೆ ಊರೇ ಪಾಲ್ಗೊಂಡು ಈಐಓ ಮಕ್ಕಳ ಕಲಿಕೆಗೆ ಇಂಬುಕೊಡುವ ಅವಕಾಶ ಕಲ್ಪಿಸಲಾಗಿದೆ. ಹಾಗಾಗಿ ಶಿಕ್ಷಣ ಪ್ರೇಮಿಗಳು ಊರಿನ ನಾಗರಿಕರು, ಹಳೆಯ ವಿದ್ಯಾರ್ಥಿಗಳ ಜೊತೆಗೆ ಮಕ್ಕಳ ಪಾಲಕರೆಲ್ಲರೂ ಬನ್ನಿರಿ, ನಾವೆಲ್ಲಾ ಈ ಎಲ್ಲಾ ಹಂತದ ಕಲಿಕಾ ಹಬ್ಬದಲ್ಲಿ ಪಾಲ್ಗೊಳ್ಳೋಣ, ಮಕ್ಕಳ ಸಂತಸದ ಕಲಿಕೆಗೆ ಸಾಕ್ಷಿಯಾಗೋಣ. ಮಕ್ಕಳಿಗೆ ಪ್ರಶ್ನಿಸುವ ಪ್ರಜ್ಞೆ ಬೆಳೆಸೋಣ.



- ಬಸವರಾಜ ಎಂ.ಯರಗುಪ್ಪಿ.
ಬಿಆರ್‌ಪಿ, ಶಿರಹಟ್ಟಿ-ಲಕ್ಷ್ಮೇಶ್ವರ.



ಶಂಕರಮಠ ಸೇವಾ ಸಮಿತಿ ವತಿಯಿಂದ ಕೂಡಲಿ ಶ್ರೀಮದ್ ಜಗದ್ಗುರು ಅಭಿನವ ಶಂಕರಭಾರತೀ ಮಹಾಸ್ವಾಮಿಗಳಿಗೆ ಗುರುವಂದನೆ ಸಲ್ಲಿಸಲಾಯಿತು. ಶಂಕರಮಠ ಸೇವಾ ಸಮಿತಿ ಕಾರ್ಯದರ್ಶಿಗಳಾದ ವೇ.ಮೂ. ರತ್ನಾಕರಭಟ್ ಜೋಶಿ, ಕೋಶಾಧ್ಯಕ್ಷರಾದ ಪ್ರೊ. ಎ.ಡಿ. ಗೋಡಖಿಂಡಿ, ಗದಗ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ, ಗದಗ-ಬೆಟಗೇರಿ ಬ್ರಹ್ಮವೃಂದದ ಅಧ್ಯಕ್ಷ ದತ್ತಂಭಟ್ ತೆಂಬದಮನಿ, ಅದ್ವೈತ ಪ್ರಸಾರ ಪರಿಷತ್ ಅಧ್ಯಕ್ಷ ರಾಮಚಂದ್ರ ಮೋನೆ, ಕುಮಾರವ್ಯಾಸ ಪ್ರತಿಷ್ಠಾನದ ಅಧ್ಯಕ್ಷ ಪ್ರೊ. ಎಸ್.ಜಿ. ಪಾಟೀಲ, ಬ್ರಾಹ್ಮಣ ಮಹಾಸಭಾ ಮಹಿಳಾ ಘಟಕದ ಸಂಚಾಲಕಿ ಕಲಾವತಿ ಅಲಬೂರ, ಸುಮನ ಪಾಟೀಲ, ರವಿ ಪೂಜಾರ, ಪ್ರಸನ್ನಕುಮಾರ ಇನಾಮದಾರ, ಪ್ರೊ. ಅನೀಲ ವೈದ್ಯ, ವೇ.ಮೂ. ಗಣೇಶಭಟ್ ಪುರಾಣಿಕ, ಎಂ.ಟಿ. ಭಟ್, ಡಾ. ದತ್ತಪ್ರಸನ್ನ ಪಾಟೀಲ ಸೇರಿದಂತೆ ಬ್ರಾಹ್ಮಣ ಸಮುದಾಯದವರು ಪಾಲ್ಗೊಂಡಿದ್ದರು.

# ಆತ್ಮಸ್ಥೈರ್ಯದೊಂದಿಗೆ ಚಿಕಿತ್ಸೆಗೊಳಗಾಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ಯಾನ್ಸರ್ ರೋಗವನ್ನು ಪ್ರಾರಂಭದಲ್ಲಿಯೇ ಪತ್ತೆ ಹಚ್ಚಿ ಸೂಕ್ತ ಚಿಕಿತ್ಸೆ ನೀಡುವುದರಿಂದ ರೋಗಿಗಳು ಸಂಪೂರ್ಣ ಗುಣಮುಖರಾಗುತ್ತಾರೆ ಎಂದು ಹುಬ್ಬಳಿಯ ತಜ್ಞವೈದ್ಯ ಡಾ. ತೇಜೇಶ್ ಯಳಮಲಿ ಹೇಳಿದರು.

ಅವರು ಮಂಗಳವಾರ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿಶ್ವ ಕ್ಯಾನ್ಸರ್ ದಿನಾಚರಣೆಯ ಅಂಗವಾಗಿ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಣಾ ಅಧಿಕಾರಿಗಳ ಕಾರ್ಯಾಲಯ, ಲಕ್ಷ್ಮೇಶ್ವರ ಸಮುದಾಯದ ಅರೋಗ್ಯ ಕೇಂದ್ರ, ಹುಬ್ಬಳ್ಳಿ ಸೂಪರ್ ಸ್ಪೆಷಾಲಿಟಿ ಹಾಸ್ಪಿಟಲ್ ಸಂಯುಕ್ತಾಶ್ರಯದಲ್ಲಿ ನಡೆದ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರದಲ್ಲಿ ಮಾತನಾಡಿದರು.




ದೀರ್ಘಕಾಲದಿಂದ ಮಾಯದ ಹುಣ್ಣು, ಗಡ್ಡೆಯಲ್ಲಿ ತ್ವರಿತ ಬೆಳವಣಿಗೆ, ಧ್ವನಿಯಲ್ಲಿ ಬದಲಾವಣೆ, ನುಂಗಲು ತೊಂದರೆ, ತೀವ್ರ ನೋವು, ಸುಸ್ತು ಹೀಗೆ ಕ್ಯಾನ್ಸರ್ ರೋಗದ ಲಕ್ಷಣಗಳು ಇರುತ್ತವೆ. ಅವುಗಳನ್ನು ಪ್ರಾರಂಭದಲ್ಲಿ ಗುರುತಿಸಿ ಚಿಕಿತ್ಸೆ ಪಡೆಯಬೇಕು. ರೋಗಿಗಳ ಸಂಭಾಷಣೆಯ ಗೌಪ್ಯವಾಗಿ ಇಡಲಾಗುವುದು. ಕ್ಯಾನ್ಸರ್ ರೋಗಕ್ಕೆ ಭಯ ಪಡುವ ಅಗತ್ಯವಿಲ್ಲ, ರೋಗಿಗಳು ಆತ್ಮಸ್ಥೈರ್ಯದೊಂದಿಗೆ ಚಿಕಿತ್ಸೆಗೊಳಗಾಗಬೇಕು ಎಂದರು.

ಸಮುದಾಯ ಅರೋಗ್ಯ ಕೇಂದ್ರದ ದಂತ ವೈದ್ಯ ಡಾ. ಪ್ರವೀಣ ಸಜ್ಜನ ಮಾತನಾಡಿ, ಕ್ಯಾನ್ಸರ್ ರೋಗಿಯ ಕಾಳಜಿ ಬಗ್ಗೆ ಮನೆಯವರು ಹಾಗೂ ಆಪ್ತರಲ್ಲಿ ಅರಿವು ಮೂಡಿಸುವ ಸಲುವಾಗಿ ಪ್ರತಿ ವರ್ಷ ವಿಶ್ವ ಕ್ಯಾನ್ಸರ್ ದಿನವನ್ನು ಆಚರಿಸಲಾಗುತ್ತದೆ. ಭಯಪಡದೆ ಸರಿಯಾಗಿ ಚಿಕಿತ್ಸೆ ಪಡೆಯಬೇಕು ಎಂದು ಹೇಳಿದರು.

ಈ ವೇಳೆ ಸಮುದಾಯ ಅರೋಗ್ಯ ಕೇಂದ್ರದ ಡಾ. ಶ್ರೀಕಾಂತ ಕಾಟೆವಾಲೆ, ಎನ್‌ಸಿಡಿ ಮೆಡಿಕಲ್ ಆಫೀಸರ್ ಡಾ. ಬಿಸ್ಮಿಲ್ಲಾ ವಲ್ಲೆಬಾಯಿ, ಹುಬ್ಬಳ್ಳಿಯ ಡಾ. ಜಗದೀಶ ತುಗಚಿ, ಪಿಆರ್‌ಓ ನವೀನ ಮಾಟರಂಗಿ, ನರ್ಸ್ ಮಂಜುಳಾ ಸೇರಿ ವೈದ್ಯರ ತಂಡದವರಿದ್ದರು.

# ಇನ್ನೊಬ್ಬರ ಜೀವನಕ್ಕೆ ಬೆಳಕಾಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೀಪದ ಬೆಳಕು ಜಗತ್ತಿನ ಎಲ್ಲಕ್ಕಿಂತ ಶ್ರೇಷ್ಠ. ಅದಿಲ್ಲದಿದ್ದರೆ ಎಲ್ಲವೂ ಏನೂ ಇಲ್ಲ ಎಂದು ಕೊಪ್ಪಳ ಗವಿಸಿದ್ದೇಶ್ವರ ಮಠದ ಶ್ರೀ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಸೋಮವಾರ ಪಟ್ಟಣದ ಕದರಗೇರಿ ಓಣಿಯಲ್ಲಿ ಜೀರ್ಣೋದ್ಧಾರಗೊಂಡ ಶ್ರೀ ಶಿವರುದ್ರಮ್ಮ ದೇವಿ ದೇವಸ್ಥಾನದ ವಾರ್ಷಿಕೋತ್ಸವ, ಪಲ್ಲಕ್ಕಿ,



ದೀಪೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.


ಮನೆ ಬೆಳಗಲು ಭೌತಿಕ ದೀಪವಿರುವಂತೆ ಅಂತರಾತ್ಮ ಬೆಳಗಲು ಜ್ಞಾನದ ಬೆಳಕು ಅಗತ್ಯ. ಧಾರ್ಮಿಕವಾಗಿ ದೇವಸ್ಥಾನದಲ್ಲಿ ಕಾರ್ತಿಕ ದೀಪ ಬೆಳಗಿಸುವ ಜತೆಗೆ ಪ್ರತಿಯೊಬ್ಬರೂ ಅಂತರಾತ್ಮದ ಜ್ಯೋತಿ ಬೆಳಗಿಸಿಕೊಂಡು ಮತ್ತೊಬ್ಬರ ಜೀವನಕ್ಕೆ ಬೆಳಕಾಗಬೇಕು. ಶರಣರ ಜ್ಞಾನಾಮೃತದ ಪ್ರವಚನ ಮನುಷ್ಯನ ಬದುಕಿಗೆ ದಾರಿದೀಪವಾಗುತ್ತವೆ ಎಂದರು.

ಹರ್ಲಾಪೂರ-ಹಳ್ಳಿಗುಡಿಯ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಜೀವನ ದರ್ಶನ ಪ್ರವಚನ ನೀಡಿದರು. ಈ ವೇಳೆ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ದೇವಪ್ಪ ಮಲ್ಲೂರ, ಯಲ್ಲಪ್ಪ ಅಡರಕಟ್ಟಿ, ಮಹದೇವಪ್ಪ ಗಿಡಿಬಿಡಿ, ಕಾಶಪ್ಪ ಲಿಂಗಶೆಟ್ಟಿ, ಪುಲಿಕೇಶಿ ಬಟ್ಟೂರು, ಈರಪ್ಪ ಹಾದಿಮನಿ, ಶಿವಯೋಗೆಪ್ಪ ಚಂದರಗಿ, ಗಂಗಾಧರ ಶಿರಗಣ್ಣನವರ ಸೇರಿ ಹಲವರಿದ್ದರು. ದೇವಸ್ಥಾನ ಟ್ರಸ್ಟ್‌ನ ಅಧ್ಯಕ್ಷ ಸೋಮಣ್ಣ ಉಪನಾಳ ನಿರೂಪಿಸಿದರು.

# ಅಲ್ಪಸಂಖ್ಯಾತ ವಿರೋಧಿ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ವಿತ್ತ ಮಂತ್ರಿಗಳಾದ ನಿರ್ಮಲಾ ಸೀತಾರಾಮನ್ 2025-26ನೇ ಸಾಲಿನ ಬಜೆಟ್ ಮಂಡಿಸಿರುವುದು ಪಿಪಿಪಿ (ಖಾಸಗಿ ಸಹಭಾಗಿತ್ವದ) ಮಾಡೆಲ್ ಮೂಲಕ ಖಾಸಗಿ ವ್ಯಕ್ತಿಗಳಿಗೆ ಅನುಕೂಲ ಮಾಡಿಕೊಡುವ ಉದ್ದೇಶ ಹೊಂದಿದೆ ಎಂದು ಕೆಪಿಸಿಸಿ ಅಲ್ಪಸಂಖ್ಯಾತ ಘಟಕದ ಗದಗ ಜಿಲ್ಲಾಧ್ಯಕ್ಷರಾದ ಉಮರ್ ಫಾರೂಕ್ ಹುಬ್ಬಳ್ಳಿ ಖಂಡಿಸಿದ್ದಾರೆ.



ಅತೀ ಹೆಚ್ಚು ತೆರಿಗೆ ಕಟ್ಟುವ ಕರ್ನಾಟಕ ರಾಜ್ಯಕ್ಕೆ ಬಜೆಟ್‌ನಲ್ಲಿ ಅನ್ಯಾಯವಾಗಿದೆ. ಉತ್ತರದ ರಾಜ್ಯಗಳಿಗೆ ಅತೀ ಹೆಚ್ಚು ಹಣವನ್ನು ಕೊಟ್ಟು ಯೋಜನೆಗಳನ್ನು ರೂಪಿಸಿರುವುದು ಚುನಾವಣೆ ಮುಂದಿಟ್ಟುಕೊಂಡು ಮಾಡಿದ ಬಜೆಟ್ ಆಗಿದೆ. ಅಲ್ಪಸಂಖ್ಯಾತ ಸಮುದಾಯಕ್ಕೆ ಒಂದು ರೂಪಾಯಿಯನ್ನೂ ಹಂಚಿಕೆ ಮಾಡಿಲ್ಲ. ಬಡವರಿಗೆ ಆರ್ಥಿಕವಾಗಿ ಅಭಿವೃದ್ಧಿಗೊಳ್ಳಲು ಪೂರಕ ಯೋಜನೆಗಳಿಲ್ಲ. ಒಟ್ಟಾರೆ ಖಾಸಗಿ ವ್ಯಕ್ತಿಗಳಿಗೆ ಅನುಕೂಲ ಮಾಡುವ ಅಲ್ಪಸಂಖ್ಯಾತ ವಿರೋಧಿ ಬಜೆಟ್ ಇದಾಗಿದೆ ಎಂದಿದ್ದಾರೆ.

# ಕುಂಭ ಮೇಳ ಕಾಲ್ತುಳಿತದಲ್ಲಿ 2ಸಾವಿರ ಜನರು ಸಾವನ್ನಪ್ಪಿದ್ದಾರೆ

■ವಿಜಯಸಾಕ್ಷಿ ಸುದ್ದಿ, ಮುಂಬಯಿ

ಪ್ರಯಾಗ್ ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭ ಮೇಳದಲ್ಲಿ ಜನವರಿ 29ರಂದು ಸಂಭವಿಸಿದ ಕಾಲ್ತುಳಿತ ದುರಂತದಲ್ಲಿ 2000 ಜನರು ಸಾವನ್ನಪ್ಪಿದ್ದಾರೆ ಎಂದು ಶಿವಸೇನೆ (ಯುಬಿಟಿ) ನಾಯಕ ಸಂಜಯ್ ರಾವತ್ ಹೇಳಿದ್ದಾರೆ.

ಮಂಗಳವಾರ (ಫೆ.4) ರಾಜ್ಯಸಭೆಯಲ್ಲಿ ರಾಷ್ಟ್ರಪತಿಯ ಭಾಷಣದ ವಂದನಾ ನಿರ್ಣಯದ ಮೇಲೆ ಮಾತನಾಡುವಾಗ ಕಾಲ್ತುಳಿತ ಅವಘಡವನ್ನು ಪ್ರಸ್ತಾಪಿಸಿದ ರಾವತ್, ಸಾವನ್ನಪ್ಪಿದವರ ಅಧಿಕೃತ ಮಾಹಿತಿ ನೀಡುವಂತೆ ಸರ್ಕಾರವನ್ನು ಆಗ್ರಹಿಸಿದ್ದಾರೆ.

"4-5 ದಿನಗಳ ಹಿಂದೆ ಕಾಲ್ತುಳಿತ ಸಂಭವಿಸಿದಾಗ, ಅದು ಕಾಲ್ತುಳಿತವಲ್ಲ ವದಂತಿ ಎಂದು ಹೇಳಲಾಗಿತ್ತು. ನಂತರ 30 ಜನರು ಸತ್ತರು ಎಂದಿದ್ದಾರೆ. ಈ ಅಂಕಿ ಅಂಶ ನಿಜವೇ? ಸಾವಿನ ಸಂಖ್ಯೆಯನ್ನು ಮುಚ್ಚಿಡಬೇಡಿ.

ಒಬ್ಬ ವ್ಯಕ್ತಿ ಸತ್ತರೂ ನಾವು ಜವಾಬ್ದಾರರು. ನಾವು ನಮ್ಮ ಕಣ್ಣಾರೆ ನೋಡಿದ ಅಂಕಿ ಅಂಶಗಳ ಪ್ರಕಾರ 2,000 ಜನರು ಸತ್ತಿದ್ದಾರೆ" ಎಂದು ಸಂಜಯ್ ರಾವತ್ ಹೇಳಿದ್ದಾರೆ.

# ಅಭಿನಯಗೀತೆ ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹಾತಲಗೇರಿಯ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ 7ನೇ ತರಗತಿ ವಿದ್ಯಾರ್ಥಿ ಸತೀಶ ಸುರೇಶ ಮೇಲ್ಮನಿ ಗದಗ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಅಭಿನಯಗೀತೆ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಈ ವಿದ್ಯಾರ್ಥಿಯ ಸಾಧನೆಗೆ ಗದಗ ಜಿಲ್ಲಾ ಉಪನಿರ್ದೇಶಕರಾದ ಆರ್.ಎಸ್. ಬುರಡಿ, ಅಭಿವೃದ್ಧಿ ಅಧಿಕಾರಿಗಳಾದ ಜಿ.ಎಲ್. ಬಾರಾಟಕ್ಕೆ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ವಿ.ವಿ. ನಡುವಿನಮನಿ, ಕ್ಷೇತ್ರ ಸಮನ್ವಯ ಅಧಿಕಾರಿಗಳಾದ ಎಸ್.ಜೆ. ಭಾವಿಕಟ್ಟಿ,



ಅಕ್ಷರ ದಾಸೋಹ ಅಧಿಕಾರಿಗಳಾದ ಶಂಕರ ಹಡಗಲಿ, ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ ಚಂದ್ರಶೇಖರ ಶಿವಶಿಂಪಗೇರ, ಎಸ್.ಡಿ.ಎಂ.ಸಿ. ಅಧ್ಯಕ್ಷರಾದ ಗೋವಿಂದಪ್ಪ ಪೂಜಾರ, ಉಪಾಧ್ಯಕ್ಷರು, ಸರ್ವ ಸದಸ್ಯರು ಮತ್ತು ಶಾಲೆಯ ಪ್ರಧಾನ ಗುರುಮಾತೆ, ಶಿಕ್ಷಕ ವೃಂದ, ಗ್ರಾಮದ ಗುರುಹಿರಿಯರು ಅಭಿನಂದಿಸಿದ್ದಾರೆ.

## ಅಂಗಡಿ, ವಾಣಿಜ್ಯ ಸಂಸ್ಥೆಗಳ ಮಾಲಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲಿಕರು ಹಾಗೂ ಉದ್ದಿಮೆದಾರರು ಈಗಾಗಲೇ ತಮ್ಮ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಕಾರ್ಮಿಕ ನಿರೀಕ್ಷಕರ ಕಚೇರಿ ಗದಗ 2ನೇ ವೃತ್ತ, ಇಲ್ಲಿ ನೋಂದಣಿ ಮಾಡಿಸಿಕೊಂಡ ಸಂಸ್ಥೆಗಳನ್ನು ಹೊರತುಪಡಿಸಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕಾರ್ಮಿಕರು ಇರುವ ಹಾಗೂ ಕಾರ್ಮಿಕರು ಇಲ್ಲದೇ ಇರುವ ಸಂಸ್ಥೆಗಳು ಸಹ ಕರ್ನಾಟಕ ಸರ್ಕಾರದ ಇ-ಕಾರ್ಮಿಕ ತಂತ್ರಾಂಶದಲ್ಲಿ https://www.ekarmika.karnataka.gov.in/ekarmika/Static/Home ನಿಗದಿತ ಆನ್‌ಲೈನ್ ಮೂಲಕ ಶುಲ್ಕವನ್ನು ಮತ್ತು ಅವಶ್ಯಕ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ ಸಂಸ್ಥೆಗಳ ನೋಂದಣಿ ಪತ್ರ ಪಡೆದುಕೊಳ್ಳಬೇಕೆಂದು ಹಾಗೂ ಇದಕ್ಕೆ ತಪ್ಪಿದ್ದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಕಾರ್ಮಿಕ ನಿರೀಕ್ಷಕ ಉಮೇಶ್ ಎಸ್ ಹಲ್ಲಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಪಾಲಿಟೆಕ್ನಿಕ್, ಸಂಸ್ಥೆಯ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ನಗರದ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆ ನರಸಾಪುರದಲ್ಲಿ ಫೆಬ್ರವರಿ 11 ರಂದು ಬೆಳಿಗ್ಗೆ 10.30 ರಿಂದ 1.00 ರವರೆಗೆ, ಉಚಿತ ಆರೋಗ್ಯ ತಪಾಸಣೆ ಕಾರ್ಯಕ್ರಮ ಜರುಗಲಿದೆ.

ನಗರದ ಖ್ಯಾತ ತಜ್ಞರಾದ ಡಾ. ಪ್ರೀತ್ ಖೋನಾ ಹಾಗೂ ತಂಡದವರು ತಪಾಸಣೆ ನಡೆಸುವರು. ಸಾರ್ವಜನಿಕರು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.


**ಶೇಂಗಾ ಖರೀದಿ ಪ್ರಕ್ರಿಯೆ ಬಂದ್ । ತಹಸೀಲ್ದಾರರ ಮೂಲಕ ಜಿಲ್ಲಾಧಿಕಾರಿಗಳಿಗೆ ರೈತರ ಮನವಿ**

# ಕಮರಿದ ರೈತರ ನಿರೀಕ್ಷೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರಕಾರದ ಬೆಂಬಲ ಬೆಲೆ ಖರೀದಿ ಯೋಜನೆಯಲ್ಲಿ ಶೇಂಗಾ ಖರೀದಿ ಪ್ರಕ್ರಿಯೆ ಬಂದ್ ಆಗಿದ್ದು, ಕೂಡಲೇ ಪ್ರಾರಂಭಿಸುವಂತೆ ಆಗ್ರಹಿಸಿ ಕೃಷಿಕ ಸಮಾಜ ನವದೆಹಲಿ ತಾಲೂಕಾಧ್ಯಕ್ಷ ಚನ್ನಪ್ಪ ಷಣ್ಮುಖಿ ನೇತೃತ್ವದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ ಮೂಲಕ ಜಿಲ್ಲಾಧಿಕಾರಿಗಳಿಗೆ ರೈತರು ಬುಧವಾರ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಧ್ಯಕ್ಷ ಚನ್ನಪ್ಪ ಷಣ್ಮುಖಿ ಮತ್ತು ಮಾಡಳ್ಳಿಯ ರೈತ ಮುಖಂಡ ಸುರೇಶ ಸಿಂದಗಿ, ಎಣ್ಣೆ ಬೀಜ ಬೆಳೆಗಾರರ ಸೊಸೈಟಿಯ ಬೆಂಬಲ ಖರೀದಿ ಕೇಂದ್ರದಲ್ಲಿ ಜಿಲ್ಲೆಯಲ್ಲಿ 1464 ರೈತರು ಮಾರಾಟಕ್ಕೆ ನೋಂದಣಿ ಮಾಡಿಸಿದ್ದಾರೆ. ಸರಕಾರದ ಶೇಂಗಾ ಖರೀದಿ ಹಾಗೂ ನೋಂದಣಿ ಪ್ರಕ್ರೀಯೆ ಬಂದ್ ಆಗಿ 15 ದಿನಗಳು ಕಳೆದಿದ್ದು, ಕೆಂದ್ರದ ಮುಂದೆ ಕಾಯುತ್ತಿದ್ದಾರೆ. ಇತ್ತ ಖರೀದಿ ಕೇಂದ್ರಕ್ಕೆ ತಂದಿಟ್ಟ ಶೇಂಗಾ ಚೀಲಗಳನ್ನು ವಾಪಸ್ಸು ತೆಗೆದುಕೊಂಡು ಹೋಗಲು ಕೇಂದ್ರದವರು ಹೇಳುತ್ತಿದ್ದಾರೆ.



15-20 ದಿನಗಳಿಂದ ಕಾಯ್ದಿಟ್ಟ ಶೇಂಗಾ ತೂಕದಲ್ಲಿಯೂ ಕಡಿಮೆಯಾಗುವದಲ್ಲದೆ, ಇವುಗಳ ಸಾಗಾಟ ವೆಚ್ಚ, ಹಮಾಲಿ ವೆಚ್ಚದಿಂದ ರೈತರಿಗೆ ಸಾಕಷ್ಟು ಹಾನಿಯಾಗಲಿದೆ.

ಅಲ್ಲದೆ ಕಡಲೆ ಬೆಳೆ ಬೆಂಬಲ ಖರೀದಿ ಪ್ರಕ್ರೀಯೆ ಲಾಗಿನ್ ಸಹ ಓಪನ್ ಆಗಿಲ್ಲ. ರೈತರು ಬೆಂಬಲ ಬೆಲೆಯಲ್ಲಿ ಹೆಚ್ಚಿನ ದರ ದೊರೆಯಬಹುದು ಎನ್ನುವ ಆಸೆ ಕಮರುತ್ತಿದ್ದು, ಜಿಲ್ಲಾಧಿಕಾರಿಗಳು ಕೂಡಲೇ ಶೇಂಗಾ ಖರೀದಿ ಪ್ರಕ್ರೀಯೆ ಪ್ರಾರಂಭಿಸುವದು, ಕಡಲೆ ಬೆಳೆ ಖರೀದಿ ಕೇಂದ್ರದ ಲಾಗಿನ್ ಓಪನ್ ಮಾಡಬೇಕೆಂದು ಒತ್ತಾಯಿಸಿದರು.

ಮುಖ್ಯವಾಗಿ ಈ ಬಾರಿ ಬೆಳೆಹಾನಿ, ಬೆಳೆವಿಮೆ ಮಧ್ಯಂತರ ಪರಿಹಾರಕ್ಕೆ ಅರ್ಜಿ ಸಲ್ಲಿಸಿದ ರೈತರಿಗೆ ವಿಮಾ ಕಂಪನಿಯಿಂದ ಹಾಗೂ ಇಲಾಖೆಯಿಂದ ಯಾವುದೇ ಉತ್ತರ ದೊರಕುತ್ತಿಲ್ಲ ಎಂದು ಆರೋಪಿಸಿದ ಅವರು, ಕೂಡಲೇ ಈ ಸಮಸ್ಯೆಗಳನ್ನು ಬಗೆಹರಿಸದಿದ್ದಲ್ಲಿ ತಹಸೀಲ್ದಾರ ಕಚೇರಿ ಎದುರು ಧರಣಿ ಕುಳಿತುಕೊಳ್ಳುವದಾಗಿ ಎಚ್ಚರಿಸಿದರು.

ರೈತರಾದ ಟಾಕಪ್ಪ ಸಾತಪುತೆ, ಚನ್ನಬಸಪ್ಪ ಲಿಂಗಶೆಟ್ಟಿ, ಸಿದ್ರಾಮಗೌಡ ಸಾಲ್ಮನಿ, ಸುಧೀರಗೌಡ ಸಾಲ್ಮನಿ, ಉದಯ ಹೂಗಾರ, ಮಂಜುನಾಥ ಕಳಸದ, ಕುಬೇರಪ್ಪ ಕುರಿ, ಮಂಜುನಾಥ ರಾಚನಗೌಡ್ರ, ಹನುಮಂತಪ್ಪ ಚಿಂಚಲಿ, ಈರಬಸಪ್ಪ ಜಿಡ್ಡಿಯವರ ಸೇರಿದಂತೆ ತಾಲೂಕಿನ ಅನೇಕ ಹಳ್ಳಗಳಿಂದ ರೈತರು ಪಾಲ್ಗೊಂಡಿದ್ದರು.

> ರೈತರ ಮನವಿ ಸ್ವೀಕರಿಸಿದ ತಹಸೀಲ್ದಾರ ವಾಸುದೇವ ಸ್ವಾಮಿ, ಫೆ.11ರಂದು ಲಕ್ಷ್ಮೇಶ್ವರದಲ್ಲಿ ಕೃಷಿ ಸಂಬಂಧಿತ ಅಧಿಕಾರಿಗಳ ಸಭೆ ಕರೆದು ಚರ್ಚಿಸಲಾಗುವುದು ಮತ್ತು ಈ ಕುರಿತಂತೆ ಅರ್ಜಿಯನ್ನು ಜಿಲ್ಲಾಧಿಕಾರಿಗಳಿಗೆ ತಲುಪಿಸಿ ಅವರ ಆದೇಶದ ಪ್ರಕಾರ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು. ಇದೇ ಸಂದರ್ಭದಲ್ಲಿ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರೇವಣಪ್ಪ ಮನಗೂಳಿ ಅವರಿಗೂ ಸಹ ರೈತರು ಮನವಿ ಸಲ್ಲಿಸಿದರು.

## ನೂತನ ಮಂಡಲಾಧ್ಯಕ್ಷರ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ರೋಣ ವಿಧಾನಸಭಾ ಕ್ಷೇತ್ರದ ರೋಣ ಮಂಡಲದ ನೂತನ ಅಧ್ಯಕ್ಷರಾಗಿ ಇಟಗಿ ಗ್ರಾಮದ ಉಮೇಶ ಮಲ್ಲಾಪೂರ ಹಾಗೂ ಡಂಬಳ ಮಂಡಲಾಧ್ಯಕ್ಷರಾಗಿ ಮೇವುಂಡಿ ಗ್ರಾಮದ ಅಂದಪ್ಪ ಹಾರೂಗೇರಿ ಅವರನ್ನು ಪಕ್ಷದ ಹಿರಿಯರ, ಕೋರ್ ಕಮಿಟಿ ನೇತೃತ್ವದಲ್ಲಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಕಳಕಪ್ಪ ಜಿ.ಬಂಡಿ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಚುನಾವಣಾಧಿಕಾರಿಗಳಾದ ಶಶಿಮೌಳಿ ಕುಲಕರ್ಣಿ, ಸಹ ಚುನಾವಣಾಧಿಕಾರಿಗಳಾದ



ಎಂ.ಎಸ್. ಕರಿಗೌಡ್ರ, ನಿಂಗಪ್ಪ ಕೆಂಗಾರ, ಮಂಡಲ ಮಾಜಿ ಅಧ್ಯಕ್ಷ ಮುತ್ತು ಕಡಗದ, ರವಿ ಕರಿಗಾರ, ಬಿ.ಎಂ. ಸಜ್ಜನರ, ಬೀರಪ್ಪ ಬಂಡಿ, ಹನುಮಂತಪ್ಪ ಹಟ್ಟಿಮನಿ, ಮುದ್ಲಿಂಗಪ್ಪ ಕೊರ್ಲಹಳ್ಳಿ, ಈಶ್ವರಪ್ಪ ರಂಗಪ್ಪನವರ, ಮಾಂತೇಶ ಸೊಮನಕಟ್ಟಿ, ವೆಂಕನಗೌಡ ಪಾಟೀಲ, ಶಿವಾನಂದ ಮಠದ, ಅಶೋಕ ವನ್ನಾಲ, ರಾಜೇಂದ್ರ ಘೋರ್ಪಡೆ, ಅಶೋಕ ಪವಾಡಶೆಟ್ಟರ, ನಾಗರಾಜ ಕಾಟ್ರಳ್ಳಿ, ಬಸವರಾಜ ಸಂಗನಾಳ, ಬಸವರಾಜ ಚನ್ನಳ್ಳಿ, ಶಂಕ್ರಯ್ಯ ಹಿರೇಮಠ, ಮುದಿಯಪ್ಪ ಕರಡಿ, ಶರಣಯ್ಯ ಹಿರೇಮಠ, ಬಾಲಾಜಿರಾವ್ ಬೊಸ್ಲೆ, ಉಮೇಶ ಪಾಟೀಲ, ಭಿಮಪ್ಪ ಮಾದರ, ಗುಡ್ಡಪ್ಪ ಮೂಲಿಮನಿ ಮುಂತಾದ ಪ್ರಮುಖರು ಉಪಸ್ಥಿತರಿದ್ದರು.


**ಕಸಾಪ ಕಾರ್ಯಾಲಯದಲ್ಲಿ ಶಿವಾನಂದ ಗಿಡ್ನಂದಿಯವರಿಗೆ ಭಾವಪೂರ್ಣ ಶೃದ್ಧಾಂಜಲಿ**

## ಗಿಡ್ನಂದಿಯವರ ಕನ್ನಡ ಸೇವೆ ಅನುಪಮ

■ವಿಜಯಸಾಕ್ಷಿ ಸುದ್ದಿ, ಗದಗ

ಬರಹಗಾರ, ಸಂಘಟಕ, ಸಂಸ್ಕೃತಿ ಚಿಂತಕರಾಗಿದ್ದ ಶಿವಾನಂದ ಗಿಡ್ನಂದಿ ಅವರ ಅಗಲುವಿಕೆಯ ನಿಮಿತ್ತ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದ ಕಸಾಪ ಕಾರ್ಯಾಲಯದಲ್ಲಿ ಶೃದ್ಧಾಂಜಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಮಾಜಿ ಸಚಿವ ಎಸ್.ಎಸ್. ಪಾಟೀಲ ಮಾತನಾಡಿ, ಸಾಹಿತ್ಯ ಪರಿಷತ್ತಿನಲ್ಲಿ ಪಾದರಸದಂತೆ ಓಡಾಡಿಕೊಂಡು ಕನ್ನಡ ಸೇವೆಯನ್ನು ಮಾಡಿದ ಪರಿಯನ್ನು ಮುಕ್ತ ಕಂಠದಿಂದ ಹೊಗಳಿದರು.




ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಬರಹಗಾರ ಮತ್ತು ಸಂಘಟಕನಾಗಿ ಕಳೆದ ಮೂವತ್ತು ವರ್ಷಗಳಿಂದ ಸಾಹಿತ್ಯ, ಸಂಸ್ಕೃತಿಯ ಸಂವರ್ಧನೆಗೆ ಮಾಡಿದ ಸೇವೆ ಅನುಮಪವಾದುದು ಎಂದರು.

ಕನ್ನಡ ಸಾಹಿತ್ಯ ಪರಿಷತ್ತು, ಮಕ್ಕಳ ಸಾಹಿತ್ಯ ಪರಿಷತ್ತು, ಶಿಕ್ಷಕರ ಸಂಘಟನೆಯಲ್ಲಿ ಮಾಡಿದ ಸೇವೆಯನ್ನು ಡಾ. ಜಿ.ಬಿ. ಪಾಟೀಲ, ಡಾ. ರಾಜೇಂದ್ರ ಗಡಾದ, ಸಂಗಮೇಶ ದುಂದೂರ, ಎಸ್.ಡಿ. ಗಾಂಜಿ, ಡಾ. ಎಚ್.ಬಿ. ಪೂಜಾರ, ಡಾ. ಆರ್.ಎಲ್. ಹಂಸನೂರ, ಸಿದ್ಧರಾಮೇಶ ಪಟ್ಟೇದ, ಜಿನಗಾ, ಮತ್ತಿತರು ಸ್ಮರಿಸಿದರು.

ಸಭೆಯಲ್ಲಿ ಡಾ. ರಾಜಶೇಖರ ದಾನರಡ್ಡಿ, ಎಸ್. ಯು. ಸಜ್ಜನಶೆಟ್ಟರ, ಡಾ. ರಶ್ಮಿ ಅಂಗಡಿ, ಜೆ.ಎನ್. ಪಾಟೀಲ, ಸತೀಶ ಚನ್ನಪ್ಪಗೌಡ್ರ, ಶಶಿಕಾಂತ ಕೊರ್ಲಹಳ್ಳಿ, ಶಾಂತಕುಮಾರ ಭಜಂತ್ರಿ, ಪಾರ್ವತಿ ಬೇವಿನಮರದ, ಅಕ್ಕಮಹಾದೇವಿ ರೊಟ್ಟಿಮಠ, ಅನಸೂಯಾ ಮಿಟ್ಟಿ, ವಿ.ಎನ್. ಬೇಂದ್ರೆ, ಬಂಗಾರಗುಂಡ ಗುಡದಪ್ಪ, ಪ್ರ.ತೋ. ನಾರಾಯಣಪೂರ, ರಾಜಶೇಖರ ಕರಡಿ, ಶರಣಪ್ಪ ಹೊಸಂಗಡಿ, ಭಾಗ್ಯಶ್ರೀ ಹುರಕಡ್ಲಿ, ಮೊದಲಾದವರು ಉಪಸ್ಥಿತರಿದ್ದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಡಾ. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು.

## ಉಚಿತ ರಕ್ತ ಗುಂಪು ತಪಾಸಣಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಭಾವಸಾರ ವಿಜನ್ ಇಂಡಿಯಾ ಆಶ್ರಯದಲ್ಲಿ ಇಲ್ಲಿಯ ಸರಕಾರಿ ಮಾದರಿಯ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ ಉಚಿತವಾಗಿ ಮಕ್ಕಳ ರಕ್ತ ಗುಂಪು ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ರಕ್ತದ ಗುಂಪು ತಿಳಿಯುವುದರಿಂದ ರೋಗಿಗಳಿಗೆ ರಕ್ತದ ಅವಶ್ಯಕತೆ ಇದ್ದಾಗ ಅನುಕೂಲವಾಗಲಿದೆ. ಉಚಿತವಾಗಿ ಈ ಶಿಬಿರವನ್ನು ಏರ್ಪಡಿಸಿದ್ದರಿಂದ ಶಾಲೆಯ ಮಕ್ಕಳಿಗೆ ಪ್ರಯೋಜನಕಾರಿಯಾಗಿದೆ




ಎಂದರು.

ಡಾ. ದತ್ತಾತ್ರೆಯ ವೈಕುಂಠೆ ಮಕ್ಕಳ ರಕ್ತವನ್ನು ತಪಾಸಣೆ ಮಾಡಿ, ರಕ್ತದ ಗುಂಪನ್ನು ನಮೂದಿಸಿ ಅವರಿಗೆ ಕಾರ್ಡ್‌ನ್ನು ವಿತರಿಸಿದರು. ಎಸ್.ಡಿ.ಎಂ.ಸಿ ಉಪಾಧ್ಯಕ್ಷ ಗವಿಶಿದ್ದಪ್ಪ ಯಲಿಶಿರುಂದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಸದಸ್ಯರಾದ ಅನಸಮ್ಮ ಅಂಬಕ್ಕಿ, ಕೆ.ಎಸ್. ಬೆಂತೂರು, ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ, ತಾ.ಪಂ ಮಾಜಿ ಸದಸ್ಯ, ಲಕ್ಕುಂಡಿ ಬಿ.ಜೆ.ಪಿ ಮಂಡಲದ ಅಧ್ಯಕ್ಷ ಮಹೇಶಕುಮಾರ ಮುಸ್ಕಿನಭಾವಿ, ಭಾರತೀಯ ಕಿಸಾನ್ ಸಂಘದ ತಾಲೂಕಾಧ್ಯಕ್ಷ ವೆಂಕಟೇಶ ದೊಂಗಡೆ, ವಿರೂಪಾಕ್ಷಯ್ಯ ಪತ್ರಿಮಠ, ಗೀತಾ ನೂಕಾಪೂರ, ಅಂಜನಾ ಕರಿಯಲ್ಲಪ್ಪನವರ, ಎಸ್.ಜಿ. ಕುರುವತ್ತೆಗೌಡರ, ಪಿ.ಎನ್. ಶೀರೋಳ ಉಪಸ್ಥಿತರಿದ್ದರು.

## ಅಬಾಕಸ್‌ನಲ್ಲಿ ದ್ವಿತೀಯ ಸ್ಥಾನ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ನಾರಾಯಣ ಹುಲಮನಿ ಫೌಂಡೇಶನ್ ವತಿಯಿಂದ ನಡೆದ ಇಂಟೆಲಿಕಿಡ್ಸ್ ಅಬಾಕಸ್ 1ನೇ ಲೆವಲ್ ಸ್ಪರ್ಧೆಯಲ್ಲಿ ನೀಲಗುಂದದ ದಿವ್ಯ ಚೇತನ ಆಂಗ್ಲ ಮಾಧ್ಯಮ ಶಾಲೆಯ 3ನೇ ತರಗತಿ ವಿದ್ಯಾರ್ಥಿನಿ ಸಾಕ್ಷಿ ಕಲ್ಲನಗೌಡ್ರ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿ ದ್ವಿತೀಯ ಸ್ಥಾನ ಪಡೆದಿದ್ದಾಳೆ. ಧಾರವಾಡದ ರಾಯಾಪೂರದಲ್ಲಿರುವ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ




ತರಬೇತಿ ಸಂಸ್ಥೆಯಲ್ಲಿ ಇತ್ತೀಚೆಗೆ ಫೌಂಡೇಶನ್‌ನ ವ್ಯವಸ್ಥಾಪಕ ನಿರ್ದೇಶಕಿ ಸೀಮಾ ಹುಲಮನಿ ಪ್ರಶಸ್ತಿ ಪ್ರದಾನ ಮಾಡಿದರು.

**ಬ್ಯಾಂಕ್‌ಗಳಿಗೆ ಪಾವತಿಸಬೇಕಿರುವುದಕ್ಕಿಂತ ಹೆಚ್ಚು ವಸೂಲಿ ಮಾಡಲಾಗಿದೆ**

## ಹೈಕೋರ್ಟ್ ಮೊರೆ ಹೋದ ವಿಜಯ ಮಲ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಿಂಗ್ ಫಿಶರ್ ಏರ್‌ಲೈನ್ಸ್‌ಗೆ ಸಂಬಂಧಿಸಿದ ಸಾಲ ವಸೂಲಾತಿ ಪ್ರಕ್ರಿಯೆಗೆ ತಡೆ ನೀಡಬೇಕು ಎಂದು ಕೋರಿ ವಿದೇಶಕ್ಕೆ ಪರಾರಿಯಾಗಿರುವ ಉದ್ಯಮಿ ವಿಜಯ್ ಮಲ್ಯ ಸಲ್ಲಿಸಿರುವ ಅರ್ಜಿ ಸಂಬಂಧ ಸಾಲ ವಸೂಲಾತಿ ನ್ಯಾಯ ಮಂಡಳಿಯ ವಸೂಲಾತಿ ಅಧಿಕಾರಿಗಳು, ಭಾರತೀಯ ಸ್ಟೇಟ್ ಬ್ಯಾಂಕ್ ಸೇರಿ 10 ಬ್ಯಾಂಕ್‌ಗಳಿಗೆ ಕರ್ನಾಟಕ ಹೈಕೋರ್ಟ್ ಬುಧವಾರ (ಫೆ.5) ನೋಟಿಸ್ ಜಾರಿ ಮಾಡಿದೆ ಎಂದು ವರದಿಯಾಗಿದೆ.

ಅರ್ಜಿ ವಿಚಾರಣೆ ವೇಳೆ ವಿಜಯ್ ಮಲ್ಯ ಪರ ವಾದ ಮಂಡಿಸಿದ ಹಿರಿಯ ವಕೀಲ ಸಾಜನ್ ಪೂವಯ್ಯ, 6,200 ಕೋಟಿ ರೂಪಾಯಿ ಸಾಲ ಕೊಡಬೇಕಿತ್ತು. 14,000 ಕೋಟಿ ರೂಪಾಯಿ ವಸೂಲಾಗಿದೆ ಎಂದು ಕೇಂದ್ರ



ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಲೋಕಸಭೆಗೆ ತಿಳಿಸಿದ್ದಾರೆ.

ಸಾಲ ವಸೂಲಾತಿ ಅಧಿಕಾರಿ 10,200 ಕೋಟಿ ರೂಪಾಯಿ ವಸೂಲಾಗಿದೆ ಎಂದಿದ್ದಾರೆ.

ಸಂಪೂರ್ಣ ಸಾಲ ತೀರಿದ್ದರೂ ಈಗಲೂ ಪ್ರಕ್ರಿಯೆ ಮುಂದುವರಿಸಲಾಗುತ್ತಿದೆ.

ಹೀಗಾಗಿ ಸಾಲ ವಸೂಲಿಯಾದ ಲೆಕ್ಕಪತ್ರ ನೀಡುವಂತೆ ನಿರ್ದೇಶಿಸಬೇಕು ಎಂದು ಮನವಿ ಮಾಡಿದ್ದಾರೆ. ಮುಂದುವರಿದು, ಹಣ ವಸೂಲಾತಿ ಪ್ರಕ್ರಿಯೆ ಮುಂದುವರಿದಿದ್ದು, ಪ್ರಾಥಮಿಕ ಸಾಲವನ್ನು ಪಾವತಿಸಲಾಗಿದೆಯೇ ಅಥವಾ ಇಲ್ಲವೇ ಎಂಬುವುದರ ಬಗ್ಗೆ ಯಾವುದೇ ಆದೇಶ ಮಾಡಲಾಗಿಲ್ಲ. ಪ್ರಕ್ರಿಯೆ ಮುಂದುವರಿಸದಂತೆ ಮಧ್ಯಂತರ ಆದೇಶ ಮಾಡಬೇಕು ಎಂದು ಕೋರಿದ್ದಾರೆ.

**ಡಿಸಿಎಂ ಡಿಕೆ ಶಿವಕುಮಾರ್ ಸ್ಪಷ್ಟನೆ**

## ಕುಂಭಮೇಳ ಭೇಟಿ ವೈಯಕ್ತಿಕ ನಂಬಿಕೆ ವಿಷಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಉತ್ತರ ಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಭೇಟಿ ನೀಡುವ ತಮ್ಮ ಯೋಜನೆಗಳ ಕುರಿತಾದ ಟೀಕೆಗಳಿಗೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಬುಧವಾರ ಪ್ರತಿಕ್ರಿಯಿಸಿದ್ದು, "ನಮ್ಮ ವೈಯಕ್ತಿಕ ನಂಬಿಕೆಗಳು ಮತ್ತು ಭಕ್ತಿಯನ್ನು ಪ್ರಶ್ನಿಸುವ ಹಕ್ಕು ಯಾರಿಗೂ ಇಲ್ಲ" ಎಂದು ಹೇಳಿದ್ದಾರೆ.

ಕುಂಭ ಮೇಳಕ್ಕೆ ಭೇಟಿ ನೀಡುವ ತಮ್ಮ ಯೋಜನೆಯನ್ನು ಪ್ರಶ್ನಿಸಿದ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಅವರ ಹೇಳಿಕೆಗಳಿಗೆ ಶಿವಕುಮಾರ್ ಪ್ರತಿಕ್ರಿಯಿಸಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಇತ್ತೀಚಿನ ಹೇಳಿಕೆಗೆ ಸಂಪರ್ಕಿಸಲು ಪ್ರಯತ್ನಿಸಿದರು.

ಇತ್ತೀಚೆಗೆ, ಗಂಗಾ ಸ್ನಾನದಿಂದ ಬಡತನ ನಿರ್ಮೂಲನೆ ಸಾಧ್ಯವೇ ಎಂದು ಖರ್ಗೆ ಪ್ರಶ್ನಿಸಿದ್ದರು, ಬಿಜೆಪಿ ನಾಯಕರು ಕ್ಯಾಮೆರಾಗಳಿಗಾಗಿ ಸ್ನಾನ ಮಾಡಲು ಸ್ಪರ್ಧಿಸುತ್ತಿದ್ದಾರೆ



ಎಂದು ಆರೋಪಿಸಿದರು.

"ವಿರೋಧ ಪಕ್ಷದ ನಾಯಕರು ನನ್ನ ವಿರುದ್ಧ ಹೇಳಿಕೆಗಳನ್ನು ನೀಡುವ ಮೂಲಕ ತಮ್ಮ ಪಕ್ಷದಲ್ಲಿ ಗೌರವವನ್ನು ಗಳಿಸುತ್ತಾರೆ ಎಂದು ಭಾವಿಸುತ್ತಾರೆ. ಯಾರಾದರೂ ಏನು ಬೇಕಾದರೂ ಹೇಳಲಿ, ಅದು ನಮ್ಮ ಧರ್ಮ ಮತ್ತು ಕರ್ಮದ ವಿಷಯ; ನಮ್ಮ ಆಚರಣೆಗಳು, ಸಂಪ್ರದಾಯಗಳು ಮತ್ತು ನಂಬಿಕೆಗಳ ವಿಷಯ" ಎಂದು ಶಿವಕುಮಾರ್ ಹೇಳಿದರು.

"ಗಂಗಾ, ಕಾವೇರಿ, ಕೃಷ್ಣಾ, ಬ್ರಹ್ಮಪುತ್ರ, ಅರ್ಕಾವತಿ ಮತ್ತು ವೃಷಭಾವತಿಯಂತಹ ನದಿಗಳು ಯಾರಿಗೂ ಸೇರಿಲ್ಲ. ನೀರಿಗೆ ಬಣ್ಣ, ರುಚಿ ಅಥವಾ ಆಕಾರವಿಲ್ಲ, ಎಲ್ಲರಿಗೂ ನೀರು ಬೇಕು. ಜನರು ಏನು ಬೇಕಾದರೂ ಹೇಳುತ್ತಾರೆ, ಅವರ (ಅಶೋಕ) ಸಮಸ್ಯೆ ಏನೆಂದು ನನಗೆ ತಿಳಿದಿಲ್ಲ. ಬಹುಶಃ ಅವರಿಗೆ ಏನಾದರೂ ಸಮಸ್ಯೆ ಇರಬಹುದು. ನನ್ನ ವೈಯಕ್ತಿಕ ನಂಬಿಕೆಗಳ ಬಗ್ಗೆ ಮಾತನಾಡುವ ಹಕ್ಕು ಯಾರಿಗೂ ಇಲ್ಲ. ನನ್ನ ನಂಬಿಕೆ ಮತ್ತು ಭಕ್ತಿ ನನ್ನ ವೈಯಕ್ತಿಕ ವಿಷಯಗಳು" ಎಂದು ಅವರು ಹೇಳಿದರು.

"ಖರ್ಗೆ ಈಗ ಪ್ರಶ್ನಿಸುವುದಿಲ್ಲವೇ, ಉಪಮುಖ್ಯಮಂತ್ರಿ ಶಿವಕುಮಾರ್ ಗಂಗಾ ಸ್ನಾನ ಮಾಡಿದ ತಕ್ಷಣ ಅವರ ಎಲ್ಲಾ ಪಾಪಗಳು ತೊಳೆಯಲ್ಪಡುತ್ತವೆಯೇ? ಕೆಪಿಸಿಸಿ ಅಧ್ಯಕ್ಷ ಶಿವಕುಮಾರ್ ಕುಂಭಮೇಳದಲ್ಲಿ ಪವಿತ್ರ ಸ್ನಾನ ಮಾಡಿದ ತಕ್ಷಣ ಕರ್ನಾಟಕದಲ್ಲಿ ಬಡತನ ನಿರ್ಮೂಲನೆಯಾಗುತ್ತದೆಯೇ?" ಎಂದು ಆರ್ ಅಶೋಕ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದರು.

## ಲೋಕಾಯುಕ್ತ ಜನ ಸಂಪರ್ಕ ಸಭೆ ಫೆ.12ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಛೇರಿಯ ಪೊಲೀಸ್ ಅಧಿಕಾರಿಗಳು ಫೆ.12ರಂದು ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಶಿರಹಟ್ಟಿಯ ತಹಸೀಲ್ದಾರ ಕಛೇರಿ ಸಭಾಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಈ ದಿನ ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು.

ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಹಾಗೂ ತಮ್ಮ ಸರಕಾರಿ ಕೆಲಸಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸಬಹುದು. ಸರಕಾರಿ ಅಧಿಕಾರಿಗಳು ಸರಕಾರದ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಉದ್ದೇಶಪೂರ್ವಕ ತಾರತಮ್ಯ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸಬಹುದಾಗಿದೆ.

ಸರಕಾರದ ಯೋಜನೆಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗಪಡಿಸಿದ ದೂರುಗಳ ಬಗ್ಗೆ ಹಾಗೂ ಸಾರ್ವಜನಿಕರ ಕೆಲಸ-ಕಾರ್ಯಗಳನ್ನು ನಿಗದಿತ ಸಮಯದೊಳಗೆ ಮಾಡಿಕೊಡದೆ, ಅಕ್ರಮ ಸಂಭಾವನೆ (ಲಂಚದ ಹಣ)ಯ ಸಲುವಾಗಿ ಅನಗತ್ಯ ವಿಳಂಬ ಮಾಡುತ್ತಿದ್ದರೆ ಲಿಖಿತ ದೂರನ್ನು ದಾಖಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಗದಗ ಆರಕ್ಷಕ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸಿ

▸▸ ಮೊದಲನೇ ಪುಟದಿಂದ

ಪ್ರಾಥಮಿಕ ಹಂತದ ಶಿಕ್ಷಣದಲ್ಲಿ ವಿದ್ಯಾರ್ಥಿಗಳಿಗೆ ರಸ್ತೆ ಸುರಕ್ಷತಾ ನಿಯಮಗಳ ಕುರಿತು ಅರಿವು ಮೂಡಿಸಬೇಕು. ಈ ನಿಟ್ಟಿನಲ್ಲಿ ಸಾರಿಗೆ ಇಲಾಖೆಯು ಜಾಗೃತಿ ಕಾರ್ಯಕ್ರಮ ಮಾಡುತ್ತಲೇ ಇರುತ್ತದೆ. ರಸ್ತೆ ಸುರಕ್ಷತೆಯು ಪ್ರತಿ ಮಗುವೂ ಕಲಿಯಲೇಬೇಕಾದ ಅತ್ಯಗತ್ಯ ಜೀವನ ಕೌಶಲ್ಯವಾಗಿದೆ. ಅವರು ಶಾಲೆಗೆ ನಡೆದುಕೊಂಡು ಹೋಗುತ್ತಿರಲಿ, ಬೈಸಿಕಲ್ ಸವಾರಿ ಮಾಡುತ್ತಿರಲಿ ಅಥವಾ ಹೊರಗೆ ಆಟವಾಡುತ್ತಿರಲಿ ಇನ್ನೂ ಅನೇಕ ಸಂದರ್ಭಗಳಲ್ಲಿ ಮಕ್ಕಳು ಯಾವ ರೀತಿ ಸುರಕ್ಷತಾ ಕ್ರಮ ಅನುಸರಿಬೇಕು ಎಂಬ ಬಗ್ಗೆ ತಿಳಿಸಬೇಕು. ಇದರಿಂದ ಅವರಲ್ಲಿ ಆತ್ಮವಿಶ್ವಾಸ ಮತ್ತು ಜವಾಬ್ದಾರಿ ಮೂಡುತ್ತದೆ ಎಂದು ತಿಳಿಸಿದರು.

ಗುರುರಾಜ ಪಾಟೀಲ ಕುಲಕರ್ಣಿ ಮಾತನಾಡಿ, ಸಣ್ಣಪುಟ್ಟ ತಪ್ಪಿನಿಂದ, ತಾತ್ಸಾರ, ಬೇಜವಾಬ್ದಾರಿ ಹಾಗೂ ನಿರ್ಲಕ್ಷತನದಿಂದ ವಾಹನ ಚಾಲನೆ ಮಾಡುವುದರಿಂದಾಗಿ ದೊಡ್ಡ ಅನಾಹುತ ಉಂಟಾಗಿ ಸಾವು-ನೋವು ಸಂಭವಿಸುತ್ತದೆ. ಮದ್ಯಪಾನ ಮಾಡಿ ವಾಹನ ಚಲಾಯಿಸಬಾರದು, ಅತಿ ವೇಗ ಅವಸರಕ್ಕೆ ಕಾರಣ, ಚಾಲನೆ ಮಾಡುವಾಗ ಸಂಕೇತಗಳನ್ನು ಪಾಲಿಸಬೇಕು, ಸೀಟ್ ಬೆಲ್ಟ್ ಬಳಸಬೇಕು, ಮುಖ್ಯವಾಗಿ ವಾಹನ ಚಾಲನೆ ಮಾಡುವಾಗ ಮೊಬೈಲ್ ಬಳಸಲೇಬಾರದು ಎಂದರು.

ಈ ವೇಳೆ ಗುರುರಾಜ ಪಾಟೀಲ ಕುಲಕರ್ಣಿ, ಡಾ. ಆಯ್. ಎಫ್. ಮುದಗಲ್, ಮುಖ್ಯೋಪಾಧ್ಯಾಯೆ ಕವಿತಾ ಮೆಣಸಗಿ ಸೇರಿ ಶಿಕ್ಷಕರು, ಮಕ್ಕಳು ಉಪಸ್ಥಿತರಿದ್ದರು.

### ತಾ.ಪಂ ಸಭಾಂಗಣದಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಬಿಇಓ ಅಚ್ಚರಿಯ ಹೇಳಿಕೆ

# ಫಲಿತಾಂಶ ಕುಸಿಯಲು ತನಿಖಾಧಿಕಾರಿಗಳೇ ಕಾರಣ!

■ ವಿಜಯಸಾಕ್ಷಿ ಸುದ್ದಿ, ರೋಣ

ಎಸ್‌ಎಸ್‌ಎಲ್‌ಸಿ ಪರೀಕ್ಷಾ ಪಲಿತಾಂಶ ಸುಧಾರಣೆಗೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಹಾಗೂ ವಿದ್ಯಾರ್ಥಿಗಳ ಮನೆಗಳಿಗೆ ತೆರಳಿ ಪಾಲಕರಿಗೂ ಸಹ ತಿಳುವಳಿಕೆ ನೀಡಿ ಮಕ್ಕಳ ಓದಿನ ಬಗ್ಗೆ ಗಮನಹರಿಸುವಂತೆ ಸೂಚಿಸಬೇಕು ಎಂದು ತಾ.ಪಂ ಆಡಳಿತಾಧಿಕಾರಿ ಮಹೇಶ ಪೋತದಾರ ಬಿಇಓ ರುದ್ರಪ್ಪ ಹುರುಳಿಯವರಿಗೆ ಸೂಚಿಸಿದರು.

ಅವರು ಬುಧವಾರ ತಾಪಂ ಸಭಾಂಗಣದಲ್ಲಿ ಜರುಗಿದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಿಇಓ ರುದ್ರಪ್ಪ ಹುರುಳಿ ಮಾತನಾಡಿ, ಪಲಿತಾಂಶ ಸುಧಾರಣೆಗೆ ನಮ್ಮ ಶಿಕ್ಷಕರು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದಾರೆ. ಅಲ್ಲದೆ ಹೆಚ್ಚುವರಿ ಸಮಯ ತೆಗೆದುಕೊಂಡು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿದ್ದಾರೆ. ಮುಖ್ಯವಾಗಿ ಓದಿನಲ್ಲಿ ಹಿಂದಿರುವ ಮಕ್ಕಳನ್ನು ಗುರುತಿಸಿ ಅವರಿಗೆ ಹೆಚ್ಚಿನ ಅನುಕೂಲತೆಯನ್ನು ಕಲ್ಪಿಸುತ್ತಿದ್ದಾರೆ. ಪರೀಕ್ಷೆಯ ಸಂದರ್ಭದಲ್ಲಿ ತನಿಖಾಧಿಕಾರಿಗಳ ತಂಡ ಆಗಮಿಸುತ್ತದೆ. ಇದರಿಂದ ಗಾಬರಿಗೊಳ್ಳುವ ವಿದ್ಯಾರ್ಥಿಗಳು ಸರಿಯಾಗಿ ಪರೀಕ್ಷೆ ಬರೆಯುವುದಿಲ್ಲ. ಇದೂ




ಈ ಬಾರಿ 14 ಪರೀಕ್ಷಾ ಕೇಂದ್ರಗಳಲ್ಲಿ 3919 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಬರೆಯಲಿದ್ದಾರೆ. ಕಳೆದ ಬಾರಿ ಶೇ.81ರಷ್ಟು ಫಲಿತಾಂಶವನ್ನು ಹೊಂದಲಾಗಿತ್ತು. ಈ ಬಾರಿ ಶೇ.85ರಷ್ಟು ಫಲಿತಾಂಶ ಪಡೆಯುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ ಎಂದು ಬಿಇಓ ರುದ್ರಪ್ಪ ಹುರುಳಿ ತಿಳಿಸಿದರು.

ಕೂಡ ಫಲಿತಾಂಶ ಕುಸಿತಕ್ಕೆ ಕಾರಣವಾಗಿದೆ ಎಂಬ ಅಚ್ಚರಿಯ ಹೇಳಿಕೆಯನ್ನು ನೀಡಿದ್ದು ಗಲಿಬಿಲಿಗೆ ಕಾರಣವಾಯಿತು.

ಆರೋಗ್ಯ ಇಲಾಖೆಯ ಡಾ. ಬಿ.ಎಸ್. ಭಜಂತ್ರಿ ಮಾತನಾಡಿ, ಗಜೇಂದ್ರಗಡ ತಾಲೂಕಿನ ಇಟಗಿ ಗ್ರಾಮದಲ್ಲಿ ಮಂಗಳವಾರ ಸಂಜೆ ಹುಚ್ಚು ಹಿಡಿದ ಶ್ವಾನವೊಂದು ಒಂದೇ ದಿನ 25 ಜನಕ್ಕೆ ಕಚ್ಚಿದೆ. ಎಲ್ಲರಿಗೂ ಚಿಕಿತ್ಸೆ ನೀಡಲಾಗಿದ್ದು, ಗಂಭೀರವಾಗಿ ಗಾಯಗೊಂಡವರನ್ನು ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ ಎಂದ ಅವರು, ಚುಚ್ಚು ಮದ್ದಿಗೆ ಕೊರತೆಯಿಲ್ಲ ಎಂದರು.

ಇಓ ಚಂದ್ರಶೇಖರ ಕಂದಕೂರ ಮಾತನಾಡಿ, ಅಂಗನವಾಡಿ, ಶಾಲೆ, ವಸತಿ ನಿಲಯಗಳಿಗೆ ತೆರಳಿ ಮಕ್ಕಳ ಹಾಗೂ ವಿದ್ಯಾರ್ಥಿಗಳ ಆರೋಗ್ಯವನ್ನು ಸಕಾಲಕ್ಕೆ ಪರೀಕ್ಷಿಸಬೇಕು ಎಂದರಲ್ಲದೆ,

ವಸತಿ ನಿಲಯಗಳಲ್ಲಿ ವ್ಯಾಸಾಂಗ ಮಾಡುವ ವಿದ್ಯಾರ್ಥಿಗಳು ಸಹ ಉತ್ತಮ ಪ್ರಗತಿ ಸಾಧಿಸಬೇಕು. ಶೇ.85 ಪ್ರಗತಿಗೆ ಬದಲಾಗಿ ಶೇ.100ರಷ್ಟು ಫಲಿತಾಂಶ ಸಾಧಿಸುವ ಗುರಿಯನ್ನು ಹೊಂದಬೇಕು.

**– ಚಂದ್ರಶೇಖರ ಕಂದಕೂರ.**
ಇಓ, ರೋಣ.

ತಾಲೂಕಿನಲ್ಲಿ ಮಾದರಿ ಅಂಗನವಾಡಿ ಕೇಂದ್ರಗಳನ್ನು ರೂಪಿಸಲು ಮತ್ತು ನಿರ್ಮಿಸಲು ಕ್ರಿಯಾಯೋಜನೆಯನ್ನು ರೂಪಿಸಬೇಕು ಎಂದು ತಾ.ಪಂ ಸಿಡಿಪಿ ಪಂಚಾಕ್ಷರಯ್ಯ ಹಿರೇಮಠರವರಿಗೆ ಸೂಚಿಸಿದರು.

ಇದಕ್ಕೆ ಪಂಚಾಕ್ಷರಯ್ಯ ಹಿರೇಮಠ ಪ್ರತಿಕ್ರಿಯಿಸಿ, ಬಯಲು ಹೊಂದಿರುವ ಅಂಗನವಾಡಿ ಕೇಂದ್ರಗಳ ಪಟ್ಟಿಗಳನ್ನು ತಯಾರ್ದರೆ ಅವುಗಳಿಗೆ ಕಂಪೌಂಡ್ ಜೊತೆಗೆ ಸುಂದರ ಉದ್ಯಾನವನ ನಿರ್ಮಿಸಲು ಅನುಕೂಲವಾಗುತ್ತದೆ ಎಂದರು. ನಂತರ ವಿವಿಧ ಇಲಾಖೆಗಳ ಪ್ರಗತಿ ವರದಿಗಳ ಬಗ್ಗೆ ಮಾಹಿತಿ ಪಡೆಯಲಾಯಿತು. ತಾ.ಪಂ ಯೋಜನಾಧಿಕಾರಿ ಎಸ್.ಎಸ್. ನೀಲಗುಂದ ಉಪಸ್ಥಿತರಿದ್ದರು.

### ಘಟನಾ ಸ್ಥಳಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಭೇಟಿ

# ಆಕಸ್ಮಿಕ ಬೆಂಕಿಗೆ ಮೇವಿನ ಬಣವೆ ಆಹುತಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬುಧವಾರ ಶಿರಹಟ್ಟಿ ತಾಲೂಕಿನ ಚೌಢಾಳ ಗ್ರಾಮದಲ್ಲಿ 22ಕ್ಕೂ ಹೆಚ್ಚು ಬಣವೆಗಳಿಗೆ ಆಕಸ್ಮಿಕ ಬೆಂಕಿ ತಗುಲಿ ಅಪಾರ ಪ್ರಮಾಣದಲ್ಲಿ ಮೇವು ಸುಟ್ಟು ಬೂದಿಯಾಗಿದ್ದು, ಘಟನಾ ಸ್ಥಳಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಮತ್ತು ತಹಸೀಲ್ದಾರ ಅನಿಲ ಬಡಿಗೇರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಸತತ ಬರಗಾಲದಿಂದ ರೈತರು ಸಂಕಷ್ಟವನ್ನು ಅನುಭವಿಸುತ್ತಿದ್ದು, ಜಾನುವಾರುಗಳ ಪೋಷಣೆಗೆ ಸಂಗ್ರಹಿಸಿ ಇಡಲಾಗಿದ್ದ ಮೇವಿನ ಬಣವೆಗಳು ಆಕಸ್ಮಿಕ ಬೆಂಕಿಗೆ ಆಹುತಿಯಾಗಿ ರೈತರಿಗೆ ಅಪಾರ ಹಾನಿಯಾಗಿದೆ. ಈ ಬಗ್ಗೆ ಸೂಕ್ತ ಪರಿಹಾರ ಒದಗಿಸಲು ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ರೈತರಿಗೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕಂದಾಯ ನಿರೀಕ್ಷಕ ಬಸವರಾಜ ಕಾತ್ರಾಳ ಮತ್ತು ಕೃಷಿ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಸಿದ್ಧಾರೂಢರ ಜ್ಯೋತಿ ಯಾತ್ರೆಯನ್ನು ಸ್ವಾಗತಿಸಿ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ

# ಸಮಾಜದಲ್ಲಿ ಸೌಹಾರ್ದತೆ ಇರಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಸಿದ್ಧಾರೂಢ ಮಠವು ಸಮಾಜದಲ್ಲಿ ಸರ್ವ ಜನಾಂಗದವರನ್ನೂ ಸಮಾನವಾಗಿ ಕಾಣುವ ಅತ್ಯಂತ ಪ್ರಮುಖ ಶ್ರದ್ಧಾ ಕೇಂದ್ರವಾಗಿದೆ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಬುಧವಾರ ನಗರದ ತೆ-ೂಂಟದಾರ್ಯ ಮಠದ ಆವರಣದಲ್ಲಿ ಶ್ರೀ ಸಿದ್ಧಾರೂಢರ 190ನೇ ಜಯಂತಿ, ಶ್ರೀ ಗುರುನಾಥಾರೂಢರ 115ನೇ ಜಯಂತಿ ಹಾಗೂ ಶ್ರೀ ಸಿದ್ಧಾರೂಢ ಕಥಾಮೃತ ಗ್ರಂಥದ ಶತಮಾನೋತ್ಸವದ ಹಿನ್ನೆಲೆಯಲ್ಲಿ ಆರಂಭವಾದ ಸಿದ್ಧಾರೂಢರ ಜ್ಯೋತಿ ರಥ ಯಾತ್ರೆಯನ್ನು ಸ್ವಾಗತಿಸಿ ಅವರು ಮಾತನಾಡಿದರು.




ಎಲ್ಲ ಮಠ-ಮಂದಿರಗಳು ಎಲ್ಲರನ್ನು ಭಾತೃತ್ವ ಭಾವದಿಂದ ನೋಡುವ ತತ್ವ ಸಿದ್ಧಾಂತವನ್ನು ಸಿದ್ಧಾರೂಢ ಮಠ ಹೊಂದಿದೆ. ಸಮಾಜದಲ್ಲಿ ಸೌಹಾರ್ದತೆ ಇರಬೇಕು. ಎಲ್ಲರ ಬದುಕು ಸಮಭಾವದಿಂದ ಕೂಡಿರಬೇಕು ಎನ್ನುವ ಆಶಯ ಹೊಂದಿರುವ ಸಿದ್ಧಾರೂಢರ ಜ್ಯೋತಿ ರಥಯಾತ್ರೆ ಗದಗ ಪರಿಸರಕ್ಕೆ ಆಗಮಿಸಿರುವುದು ಸಂತಸ ತಂದಿದೆ ಎಂದರು.

ಸಮಾರಂಭದಲ್ಲಿ ಜ. ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ, ರೋಣ ಶಾಸಕ ಜಿ.ಎಸ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಮಾಜಿ ಶಾಸಕ ಹಾಗೂ ಸಿದ್ಧಾರೂಢ ಮಠದ ಟ್ರಸ್ಟ್ ಗೌರವಾಧ್ಯಕ್ಷ ಡಿ.ಆರ್. ಪಾಟೀಲ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ರಾಮಣ್ಣ ಲಮಾಣಿ, ಜಿ.ಎಸ್. ಗಡ್ಡದೇವರಮಠ ಮುಂತಾದವರು ಉಪಸ್ಥಿತರಿದ್ದರು.

ಸಿದ್ಧಾರೂಢರ ಮೇಲೆ ಜನರ ಭಕ್ತಿ ಎಷ್ಟಿದೆ ಎನ್ನುವುದುಕ್ಕೆ ಹುಲಕೋಟಿ, ದುಂದೂರು, ಬಿಂಕದಕಟ್ಟಿ ಮತ್ತು ಗದಗದಲ್ಲಿ ಜ್ಯೋತಿ ರಥಯಾತ್ರೆಗೆ ಸಿಕ್ಕಿರುವ ಭಕ್ತಿಪೂರ್ವಕ ಸ್ವಾಗತವೇ ಸಾಕ್ಷಿಯಾಗಿದೆ. ಈ ಜ್ಯೋತಿ ರಥಯಾತ್ರೆ ಸರ್ವರಲ್ಲಿ ಸದ್ಭಾವ, ಸಮಭಾವ ಸೃಷ್ಟಿಸುವ ಕೆಲಸ ಮಾಡಲಿ ಎಂದು ಸಚಿವ ಎಚ್.ಕೆ. ಪಾಟೀಲ ಆಶಿಸಿದರು.

ಜ್ಯೋತಿ ರಥಯಾತ್ರೆಯು ಮಂಗಳ ವಾದ್ಯ ಮೇಳದೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ನೀಲಮ್ಮ ತಾಯಿ ಆಶ್ರಮದ ಮೂಲಕ ಶಿವಾನಂದ ಮಠಕ್ಕೆ ತಲುಪಿತು. ಜ್ಯೋತಿ ರಥಯಾತ್ರೆಯಲ್ಲಿ ನೂರಾರು ಮಹಿಳೆಯರು ಆರತಿ ಹಿಡಿದು ಭಾಗವಹಿಸಿದ್ದರು.

# ಸಿಸಿ ರಸ್ತೆ ಕಾಮಗಾರಿಗೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬುಧವಾರ ಶಿರಹಟ್ಟಿ ತೆಗ್ಗಿನಭಾವನೂರ ಗ್ರಾಮ, ಕುಸಲಾಪೂರ ಗ್ರಾಮ ಹಾಗೂ ವರವಿ ಗ್ರಾಮಗಳಲ್ಲಿ ತಲಾ 50 ಲಕ್ಷ ರೂ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಕೃತಿ ವಿಕೋಪದಿಂದ ಹಾನಿಗೊಳಗಾದ ಮೂಲಭೂತ ಸೌಕರ್ಯಗಳ ಕಾರ್ಯಕ್ಕಾಗಿ ಮುಖ್ಯಮಂತ್ರಿಗಳ ಪರಿಹಾರ ನಿಧಿ-5105 ಯೋಜನೆಯಡಿ 2.75ಕೋಟಿ ಅನುದಾನ ಬಿಡುಗಡೆ-ಯಾಗಿದ್ದು, ಈ ಅನುದಾನದಲ್ಲಿ ಆಯ್ದ ರಸ್ತೆಯನ್ನು ಸಿಸಿ ರಸ್ತೆಯನ್ನಾಗಿಸಿ ಸಾರ್ವಜನಿಕರ ಅನುಕೂಲಕ್ಕಾಗಿ ಗುಣಮಟ್ಟದ ರಸ್ತೆಯನ್ನು ನಿರ್ಮಿಸಲಾಗುವುದು. ಮತಕ್ಷೇತ್ರದಲ್ಲಿ ಹಾನಿಗೀಡಾದ ಬಹುತೇಕ ಗ್ರಾಮಗಳ ರಸ್ತೆಗಳ ಸುಧಾರಣೆಗೆ ಸಂಬಂಧಿಸಿದ ಇಲಾಖೆಗಳಿಗೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.



ಮತಕ್ಷೇತ್ರದಲ್ಲಿ ಈಗಾಗಲೇ ಗದಗ-ಇಳಕಲ್ ರಾಜ್ಯ ಹೆದ್ದಾರಿ ಕೆಲಸ ಪೂರ್ಣಗೊಳ್ಳುವ ಹಂತದಲ್ಲಿದ್ದು, ಪೂರ್ಣಗೊಂಡ ನಂತರ ಸಾರ್ವಜನಿಕರು ತಾಲೂಕಾ ಕೇಂದ್ರಕ್ಕಾಗಲೀ, ಜಿಲ್ಲಾ ಕೇಂದ್ರಕ್ಕಾಗಲೀ ತೆರಳಲು ಸುಗಮ ಸಂಚಾರ ಸಾಧ್ಯವಾಗಲಿದೆ. ಹಲವು ಕಡೆಗಳಲ್ಲಿ ರಸ್ತೆ ಸುಧಾರಣೆ ಕೆಲಸಗಳು ಪ್ರಗತಿಯಲ್ಲಿದ್ದು, ಇವುಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ತಾ.ಪಂ ಮಾಜಿ ಅಧ್ಯಕ್ಷ ಜಾನು ಲಮಾಣಿ, ತಾ.ಪಂ ಮಾಜಿ ಸದಸ್ಯ ತಿಪ್ಪಣ್ಣ ಕೊಂಚಿಗೇರಿ, ಶಂಕರ ಮರಾಠೆ, ಪ್ರವೀಣಗೌಡ ಪಾಟೀಲ, ಪರಸನಗೌಡ ಪಾಟೀಲ, ಕುಮಾರಸ್ವಾಮಿ ಹಿರೇಮಠ, ಶಾಂತಪ್ಪ ಮುರಗಿ, ವಿಜಯಗೌಡ ಪಾಟೀಲ, ವೆಂಕನಗೌಡ ಪಾಟೀಲ, ಛಬ್ಬಿ ಗ್ರಾ.ಪಂ ಸದಸ್ಯೆ ಭಾರತಿ ನಿಂಗಪ್ಪ ತಾರೀಕೊಪ್ಪ, ದುರಗಪ್ಪ ಹರಿಜನ, ಮಲಕಾಜಪ್ಪ ಶೆಟ್ಟರ, ಚನಬಸವ್ವ ಗುಡಗೇರಿ, ಗುಡದಪ್ಪ ತಳವಾರ, ಗಂಗಾಧರ ಶೆಟ್ಟರ, ರಾಮಣ್ಣ ತಳವಾರ, ಮುತ್ತಣ್ಣ ಬಡಿಗೇರ ಮುಂತಾದವರು ಉಪಸ್ಥಿತರಿದ್ದರು.

# ನೂತನ ಪದಾಧಿಕಾರಿಗಳಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೃಷಿಕ ಸಮಾಜದ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ವೀರೇಂದ್ರ ಪಾಟೀಲ, ತಾಲೂಕಾಧ್ಯಕ್ಷ ಮಹೇಶ ಹೊಗೆಸೊಪ್ಪಿನ ಹಾಗೂ ನೂತನ ಪದಾಧಿಕಾರಿಗಳನ್ನು ಲಕ್ಷ್ಮೇಶ್ವರದಲ್ಲಿ ಕೃಷಿ ಇಲಾಖೆ ವತಿಯಿಂದ ಸನ್ಮಾನಿಸಲಾಯಿತು.

ಈ ವೇಳೆ ಕೃಷಿ ಇಲಾಖೆ ನಿರ್ದೇಶಕ ರೇವಣಪ್ಪ ಮನಗೂಳಿ, ರೈತ ಸಂಪರ್ಕ ಕೇಂದ್ರ ಕೃಷಿ ಅಧಿಕಾರಿ ಚಂದ್ರಶೇಖರಗೌಡ ನರಸಮ್ಮನವರ, ಕೃಷಿಕ ಸಮಾಜದ ನೂತನ ಪದಾಧಿಕಾರಿಗಳಾದ ಪಕ್ಕೀರಗೌಡ ಅಜ್ಜನಗೌಡ್ರ, ಎಮ್.ಎಸ್. ದೊಡ್ಡಗೌಡ್ರ, ಬಸವರಾಜೇಂದ್ರಪ್ಪ ಇಟಗಿ, ರಾಜೀವ ಕುಂಬಿ, ನಿಂಗಪ್ಪ ಬನ್ನಿ, ಶಿವಯೋಗಿ ಮಾನ್ವಿ, ವಿರೂಪಾಕ್ಷಪ್ಪ ಪಡಗೇರಿ, ಅಶೋಕ ನೀರಾಲೋಟಿ, ರಮೇಶ ಉಪನಾಳ, ಶಿದ್ದು ರಗಟಿ, ಶೇಖಣ್ಣ ಕರಿನಾಗಣ್ಣವರ, ಶಿವಾನಂದ ಲಿಂಗಶೆಟ್ಟಿ, ಮುದಕಣ್ಣ ಗದ್ದಿ ಹಾಗೂ ಕೃಷಿ ಕೇಂದ್ರದ ಸಿಬ್ಬಂದಿಗಳು, ರೈತರು ಇದ್ದರು.

### ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ನಡೆಸದ ಉಪವಿಭಾಗಾಧಿಕಾರಿ ವಿರುದ್ಧ ಆಕ್ರೋಶ

# ನಗರಸಭೆ ಬಿಜೆಪಿ ಸದಸ್ಯರಿಂದ ರಸ್ತೆ ತಡೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ – ಬೆಟಗೇರಿ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ನಡೆಸದ ಉಪವಿಭಾಗಾಧಿಕಾರಿಗಳ ವಿರುದ್ಧ ನಗರಸಭೆ ಬಿಜೆಪಿ ಸದಸ್ಯರು ಬುಧವಾರ ಉಪವಿಭಾಗಾಧಿಕಾರಿ ಕಚೇರಿ ಎದುರು ರಸ್ತೆ ತಡೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು. ಚುನಾವಣೆ ಅಧಿಕಾರಿಯೂ ಆಗಿರುವ ಉಪವಿಭಾಗಾಧಿಕಾರಿಗಳು ಒಂದು ರಾಜಕೀಯ ಪಕ್ಷಕ್ಕೆ ಅಂಟಿಕೊಂಡು ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದ ನಗರಸಭೆ ಸದಸ್ಯರು, ಬಿಜೆಪಿ ಮುಖಂಡರು, ಕಾರ್ಯಕರ್ತರು ರಸ್ತೆ ತಡೆ ನಡೆಸಿದರು.

ರಸ್ತೆ ತಡೆಗೂ ಮುನ್ನ ಬಿಜೆಪಿ ಸದಸ್ಯರು ಎಸಿ ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸುತ್ತಿದ್ದರು. ಈವೇಳೆ ಮಧ್ಯ ಪ್ರವೇಶಿಸಿದ ಪೊಲೀಸರು, ಪ್ರತಿಭಟನೆಯಿಂದ ಸಾರ್ವಜನಿಕರಿಗೆ ತೊಂದ-ರೆಯಾಗುತ್ತಿದೆ ಎಂದು ಆರೋಪಿಸಿದ್ದಲ್ಲದೆ ವಿಡಿಯೋ ಚಿತ್ರೀಕರಣಕ್ಕೆ ಮುಂದಾದರು. ಆಕ್ರೋಶಗೊಂಡ ಬಿಜೆಪಿ ಸದಸ್ಯರು, ಎಸಿ ಕಚೇರಿ ಮುಂಭಾಗದಿಂದ ರಸ್ತೆಗೆ ಬಂದು ಧರಣಿ ಕುಳಿತರು. ಇದರಿಂದ ಮತ್ತಷ್ಟು ಇದರಿಂದ ಸಂಚಾರ ದಟ್ಟಣೆ ಹೆಚ್ಚಾಗಿ ಕೆಲಕಾಲ ಗೊಂದಲದ ವಾತಾವರಣ ಸೃಷ್ಟಿಯಾಗಿತ್ತು. 20 ನಿಮಿಷಕ್ಕೂ ಹೆಚ್ಚು ಕಾಲ ಬಿಜೆಪಿ ಸದಸ್ಯರು ರಸ್ತೆ ತಡೆ ನಡೆಸಿದರು. ಪೊಲೀಸರು ಮತ್ತೆ ವಿನಂತಿಸಿಕೊಂಡ ಹಿನ್ನೆಲೆಯಲ್ಲಿ ಮತ್ತೆ ಎಸಿ ಕಚೇರಿ ಎದುರು ಧರಣಿ ಕುಳಿತರು.



ಪ್ರತಿಭಟನೆಯಲ್ಲಿ ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ, ವಿದ್ಯಾವತಿ ಗಡಗಿ, ವಿಜಯಲಕ್ಷ್ಮೀ ದಿಂಡೂರ, ಚಂದ್ರು ತಡಸದ, ಅನಿಲ ಅಬ್ಬಿಗೇರಿ, ರಾಘವೇಂದ್ರ ಯಳವತ್ತಿ, ವಿನಾಯಕ ಮಾನ್ವಿ, ಮುತ್ತು ಮುಶಿಗೇರಿ, ಪ್ರಕಾಶ ಅಂಗಡಿ, ಮಾಹಾಂತೇಶ ನಲವಡಿ, ಬಿಜೆಪಿ ಮುಖಂಡರಾದ ಮಹೇಶ ದಾಸರ, ಶಿವರಾಜಗೌಡ ಹಿರೇಮನಿಪಾಟೀಲ ಇತರರು ಉಪಸ್ಥಿತರಿದ್ದರು.

ಪ್ರತಿಭಟನೆ ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ್ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದುಕಮ್ಮನವರ, ಪ್ರತಿಭಟನಾಕಾರರ ಮನವೊಲಿಸರು ಯತ್ನಿಸಿದರು. ಆದರೆ ಪಟ್ಟು ಸಡಿಲಿಸದ ಬಿಜೆಪಿ ಸದಸ್ಯರು ದಿನಾಂಕ ಘೋಷಣೆ ಆದ ನಂತರವೇ ಪ್ರತಿಭಟನೆ ಕೈ ಬಿಡುತ್ತೇವೆ ಎಂದರು. ಚುನಾವಣೆ ದಿನಾಂಕ ನಡೆಸುವ ನಿರ್ಧಾರ ಕೈಗೊಳ್ಳುವ ಅಧಿಕಾರಿ ಎಸಿ ಅವರಿಗೆ ಮಾತ್ರವಿದೆ ಎಂದಾಗ, ಆವೇಶಕ್ಕೊಳಗಾದ ಬಿಜೆಪಿ ಸದಸ್ಯರು, ಹಿರಿಯ ಅಧಿಕಾರಿಗಳಾಗಿ ಉಪವಿಭಾಗಾಧಿಕಾರಿಗಳಿಗೆ ಸೂಚನೆ ನೀಡಲು ಆಗುವುದಿಲ್ಲವೇ ಎಂದು ತರಾಟೆಗೆ ತೆಗೆದುಕೊಂಡರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka